ವಿಜಯಪುರ । ಸಂಪುಟ 02 । ಸಂಚಿಕೆ 67

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಮೇ 01, 2024

“ಗಂಡನಿಂದ ಹಣ ಕಿತ್ತುಕೊಂಡು ಹೆಂಡತಿಗೆ ಕೊಡುವ, ಬಹಿರಂಗವಾಗಿ ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಕೂಗಿದರೂ ಕ್ರಮ ಕೈಗೊಳ್ಳದ ಕಾಂಗ್ರೆಸ್ ನಿಂದ ದೇಶ ಭದ್ರವಾಗಿರಲು ಸಾಧ್ಯವೇ? ದೇಶವನ್ನೇ ಕೊಳ್ಳೆ ಹೊಡೆಯುವ ಕಾಂಗ್ರೆಸ್ ಗೆ ಬೆಂಬಲಿಸುವುದು ಯೋಗ್ಯವೇ? “

ಉದಯರಶ್ಮಿ ದಿನಪತ್ರಿಕೆ



– ರಮೇಶ ಭೂಸನೂರ

ಮಾಜಿ ಶಾಸಕರು, ಸಿಂದಗಿ

ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ಜೊತೆಗೆ ಅಂತರ ಕಾಯ್ದುಕೊಂಡ ಅಮಿತ್ ಶಾ । ರಾಜ್ಯ ಸರ್ಕಾರ ಕ್ರಮ ಕೈಗೊಂಡಿಲ್ಲವೆಂದು ಆರೋಪ

# ಪ್ರಜ್ವಲ್ ಲೈಂಗಿಕ ಹಗರಣದಲ್ಲಿ ಕಾಂಗ್ರೆಸ್ ನಿಷ್ಕ್ರೀಯತೆ :ಶಾ

ನವದೆಹಲಿ: ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರ ಮೊಮ್ಮಗ ಮತ್ತು ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಹಲವಾರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಅಶ್ಲೀಲ ಕ್ಲಿಪ್‌ಗಳ ಬಗ್ಗೆ ಕಾಂಗ್ರೆಸ್ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಕೇಂದ್ರ ಸಚಿವ ಅಮಿತ್ ಶಾ ಆರೋಪಿಸಿದ್ದಾರೆ.

ಮಂಗಳವಾರ ಬೆಳಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಶಾ, ಈ ವಿಷಯದಲ್ಲಿ ಬಿಜೆಪಿ ನಿಲುವು ಸ್ಪಷ್ಟವಾಗಿದೆ, ಪಕ್ಷವು ಮಾತೃಶಕ್ತಿ (ತಾಯಂದಿರು ಅಥ-ವಾ ಮಹಿಳೆಯರು) ಜೊತೆಗಿದೆ ಎಂದು ಹೇಳಿದರು.

“ನಾವು ದೇಶದ ಮಾತೃಶಕ್ತಿಯೊಂದಿಗೆ ನಿಲ್ಲುತ್ತೇವೆ ಎಂಬುದು ಬಿಜೆಪಿಯ



ನಿಲುವು ಸ್ಪಷ್ಟವಾಗಿದೆ. ನಾನು ಕಾಂಗ್ರೆಸ್ ಅನ್ನು ಕೇಳಲು ಬಯಸುತ್ತೇನೆ, ಯಾರ ಸರ್ಕಾರವಿದೆ? ಸರ್ಕಾರವು ಕಾಂಗ್ರೆಸ್ ಪಕ್ಷದ್ದು, ಅವರು ಇಲ್ಲಿಯವರೆಗೆ ಏಕೆ ಯಾವುದೇ ಕ್ರಮ ಕೈಗೊಂಡಿಲ್ಲ? ಇದು ರಾಜ್ಯದ ಕಾನೂನು ಸುವ್ಯವಸ್ಥೆ ಸಮಸ್ಯೆಯಾಗಿರುವುದರಿಂದ ಈ ಬಗ್ಗೆ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು” ಎಂದು ತಮ್ಮ ಎನ್‌ಡಿಎ ಅಭ್ಯರ್ಥಿ ಜೊತೆಗೆ ಅಂತರ ಕಾಯ್ದುಕೊಂಡಿದ್ದಾರೆ.


ಪ್ರಕರಣದ ತನಿಖೆಗೆ ಬಿಜೆಪಿ ಒಲವು ತೋರುತ್ತದೆ ಎಂದು ಹೇಳಿದ ಕೇಂದ್ರ ಸಚಿವರು, ತಮ್ಮ ಮೈತ್ರಿಕೂಟದ ಪಾಲುದಾರ ಜೆಡಿ (ಎಸ್) ಸಹ ಪಕ್ಷದ ಸಭೆಯಲ್ಲಿ ಒಂದು ಹೆಜ್ಜೆ ಇಡಲು ಸಜ್ಜಾಗಿದೆ ಎಂದು ಸೂಚಿಸಿದರು.

“ಇದು ತುಂಬಾ ಗಂಭೀರವಾಗಿದೆ, ನಾವು ಅದನ್ನು ಸಹಿಸುವುದಿಲ್ಲ. ನಾವು ಕಾಂಗ್ರೆಸ್‌ಗೆ ಕೇಳಲು ಬಯಸುತ್ತೇವೆ, ಅಧಿಕಾರದಲ್ಲಿದ್ದರೂ ಸರ್ಕಾರ ಇನ್ನೂ ಏಕೆ ಕ್ರಮಕೈಗೊಂಡಿಲ್ಲ? ಪ್ರಿಯಾಂಕಾ (ಗಾಂಧಿ ವಾದ್ರಾ) ಅವರ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಅವರನ್ನು ಕೇಳಬೇಕು” ಎಂದು ಶಾ ಹೇಳಿದರು.

## ರಾಜ ನುಡಿ

ಎಲ್ಲಾ ವಸ್ತುಗಳಲ್ಲಿ ಅತಿಹೆಚ್ಚು ಬಾಳಿಕೆ ಬರುವ ವಸ್ತುವೆಂದರೆ ಅದು “ಮನುಷ್ಯನ ಮಾತು”. ಬುದ್ಧ ಬಸವರನ್ನು ನಾವ್ಯಾರು ಕಂಡಿಲ್ಲ ಆದರೆ ಅವರ ಮಾತುಗಳು ಇಂದಿಗೂ ಜೀವಂತ. ಮಾತಾಡುವ ಮುನ್ನ ಎಚ್ಚರವಿರಲಿ. ಮಾತು ಮುತ್ತಾಗಿರಲಿ..

-ಡಾ. ರಾಜಶೇಖರ ನಾಗೂರ



## ವಚನ ಚಿಂತನ 369

*ಹುಟ್ಟಿತ್ತಲ್ಲಾ ಉಂಟೆನಿಸಿತ್ತಲ್ಲಾ. ಕರುವಿಟ್ಟಿತ್ತಲ್ಲಾ ರೂಪಾಯಿತ್ತಲ್ಲಾ.*
*ನೋಡ ನೋಡ ವಾಯುಗುಂದಿತ್ತಲ್ಲಾ. ನೋಡ ನೋಡ ಭಾವಗುಂದಿತಲ್ಲಾ. ಅರಿವು ವಿಕಾರದಲ್ಲಿ ಆಯಿತ್ತು, ಹೋಯಿತ್ತು, ಮಹಾಲಿಂಗ ತ್ರಿಪುರಾಂತಕಾ, ನಿಮಗೆರಗದ ತನು.*

ಆಂಧ್ರಪ್ರದೇಶದ ಪುಂಡೂರು ಎಂಬ ಗ್ರಾಮದಲ್ಲಿ ಕಲಿದೇವಿ ಎಂಬ ತಾಯಿಯ ಉದರದಲ್ಲಿ ಕ್ರಿಸ್ತಶಕ 1166 ರ ಭಾರತಹುಣ್ಣಿಮೆ ದಿನ ದಂದು ಜನಿಸಿದ ಕಿನ್ನರಿ ಬೊಮ್ಮಯ್ಯನವರು ಕಲ್ಯಾಣದ ಶರಣರ ಕಾರ್ಯಕ್ಕೆ ಮನಸೋತು ಆಗಮಿಸಿ ಬಸವಣ್ಣನವರು ಸೂಚಿಸಿ ದಂತೆ ಅಂದು ಕಲ್ಯಾಣಕ್ಕೆ ಆಗಮಿಸುವ ಶರಣರ ಸ್ವಾಗತಿಸುವ ಕಾಯಕದಲ್ಲಿ ತೊಡಗಿಕೊಂಡಿದ್ದರು, ಅಕ್ಕಮಹಾದೇವಿಯವರ ವ್ಯಕ್ತಿತ್ವವನ್ನು ಪರೀಕ್ಷಿಸಿ ಕಂಡುಕೊಂಡವರಿವರು, ಈ ಮೇಲಿನ ವಚನದಲ್ಲಿ ಮಾನವರು ಭೂಮಿಯ ಮೇಲೆ ಹುಟ್ಟಿ ವ್ಯರ್ಥ ಸಾಯುವ ಪ್ರಕ್ರಿಯೆಯನ್ನು ಅನುಭಾವಕ್ಕೆ ಒಡ್ಡಿದ್ದಾರೆ . ವಚನದ ಪ್ರಾರಂಭದ ಸಾಲಿನಲ್ಲಿ “ಹುಟ್ಟಿತ್ತಲ್ಲಾ ಉಂಟೆನಿಸಿತ್ತಲ್ಲಾ. ಕರುವಿಟ್ಟಿ ತ್ತಲ್ಲಾ ರೂಪಾಯಿತ್ತಲ್ಲಾ.” ಎನ್ನುವ ಪದಗಳು ಮಗುವಾಗಿ ಹುಟ್ಟುವುದು (ಹುಟ್ಟಿತ್ತಲ್ಲಾ) ಯುವಕನಾಗಿ ಬೆಳೆಯುವುದು(ಉಂಟೆನಿಸಿ ತ್ತಲ್ಲಾ). ಮುಂದುವರೆದು ಮದುವೆಯಾಗಿ ಮತ್ತೆ ಮಕ್ಕಳನ್ನು ಹೆರು ವುದು (ಕರುವಿಟ್ಟಿತ್ತಲ್ಲಾ ) ನಂತರ ಮಕ್ಕಳನ್ನು ಬೆಳೆಸುವುದು (ರೂಪಾಯಿತ್ತಲ್ಲಾ) ಸೂಚಿಸುತ್ತದೆ.ನಂತರದ ಸಾಲಿನಲ್ಲಿ ಆಯುಷ್ಯ ತೀರಿ ಸಾವು ಸಂಭವಿಸುವ ಪ್ರಕ್ರಿಯೆಯನ್ನು ವಿವರಿಸಲಾಗಿದೆ. (ನೋಡನೋಡ ವಾಯುಗುಂದಿತ್ತಲ್ಲಾ. ನೋಡನೋಡ ಭಾವಗುಂ ದಿತ್ತಲ್ಲಾ) ಅರಿವು ಜಾಗೃತಗೊಳಿಸಿಕೊಂಡು ಅಂಗವನ್ನು ಲಿಂಗ ಮಾಡಬೇಕಾದಂತಹ ಅವಕಾಶವನ್ನು ಕಳೆದುಕೊಂಡರನ್ನು ಕುರಿತು ಕೊನೆಗೆ ಮರುಗುತ್ತಾ ನಿಮಗೆರಗದ ತನು.ಎಂದು ಪ್ರಶ್ನಿಸುತ್ತಾ ದೇವನೊಲಿಸಿಕೊಳ್ಳಲು ಬಂದು ಕಾಯವನ್ನು ಸದುಪಯೋಗ ಪಡೆದುಕೊಳ್ಳಬೇಕೆಂದಿದ್ದಾರೆ.ಸೊಡ್ಡಳ ಬಾಚರಸರಂತೆ “ಅಂಗ ಲಿಂಗಕ್ಕೆ ಗೂಡಾಯಿತ್ತು, ಲಿಂಗ ಅಂಗಕ್ಕೆ ಗೂಡಾಯಿತ್ತು. ಅಂಗ ಲಿಂಗಸಂಗವೆಂಬ ಸಂದಳಿದು ನಿಜಲಿಂಗೈಕ್ಯವಾಯಿತ್ತು. ಭಾವ ನಿರ್ಭಾವ ನಿಷ್ಪತ್ತಿಯಲ್ಲಿ,ಮಹಾದಾನಿ ಸೊಡ್ಡಳಂಗೆ ಸರ್ವನಿರ್ವಾಣ ವಾಯಿತ್ತು.”ಅಂಗ ಲಿಂಗವಾಗಲಿ ಎಂಬ ಆಶಯ .

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ನೇಹಾ ಹತ್ಯೆ ಆರೋಪಿಗೆ ಗಲ್ಲುಶಿಕ್ಷೆಗೆ ಕರವೇ ಮನವಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನ ಬಣದ ವತಿಯಿಂದ ಹುಬ್ಬಳ್ಳಿ ಖಾಸಗಿ ಕಾಲೇಜಿನ ವಿದ್ಯಾರ್ಥಿನಿ ನೇಹಾ ಹಿರೇಮಠ ಭೀಕರ ಕೊಲೆಗೈದ ತಪ್ಪಿಸ್ಥರಿಗೆ ಗಲ್ಲು ಶಿಕ್ಷೆ ನೀಡುವ ಕು-ರಿತು ಜಿಲ್ಲಾಡಳಿತ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನ ಬಣದ ಉತ್ತರ ಕರ್ನಾಟಕದ ಅಧ್ಯಕ್ಷ ಲಕ್ಷ್ಮಣ್ ಕಂಬಾಗಿ ಮಾತನಾಡಿ, ಮಹಿಳೆಯರ ಮೇಲೆ ದೌರ್ಜನ್ಯ ಶೋಷಣೆ ಕೊಲೆಗಳು ದಿನೇ ದಿನೇ ಹೆಚ್ಚಾಗುತ್ತಿದ್ದು ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಸೂಕ್ತ ರಕ್ಷಣೆ ಇಲ್ಲದಿರುವುದರಿಂದಲೇ ಇಂಥ ಘಟನೆಗಳು ನಡೆಯುತ್ತಿವೆ. ಈಗಾಗಲೇ ನೇಹಾಳ ಕೊಲೆಗಾರನನ್ನು ಬಂಧಿಸಿದರೂ ಶೀಘ್ರ ತನಿಖೆ ನಡೆಸಿ ಗಲ್ಲು ಶಿಕ್ಷೆ ಆಗಬೇಕೆಂದು ಆಗ್ರಹಿಸಿದರು

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜಗದೇವ್ ಸೂರ್ಯವಂಶಿ, ಗಿರೀಶ ಕಲಘಟಗಿ, ಸಂಕೇತ್ ಪಟ್ಟಣದ, ಸಿದ್ದರಾಮು ಹಲ್ಲೂರ್, ಶೋಭಾ ಪಾಟೀಲ, ಚಂದ್ರಶೇಖರ್ ಕಡಕೋಳ, ಪ್ರಭು ಮಂಕಣಿ, ಮಲ್ಲಯ್ಯ ಹಿರೇಮಠ, ಶಿವಕುಮಾರ ಕುಂಬಾರ್, ಬಸಲಿಂಗಪ್ಪ ಕಪಾಲಿ, ವೆಂಕಟೇಶ್ ಮರತಿಮನಿ, ಖಾಜಾಬೀನ್ ನದಾಫ, ಸಾಹೇಬಗೌಡ ಬಿರಾದಾರ, ಶಫೀಕ್ ಗಂಗನಹಳ್ಳಿ, ಮಹಾಂತೇಶ್ ತಳವಾರ, ಮಂಜೂರ್ ನಾಗರಬಾಡಿ, ಸರ್ಫ್ರಾಜ್ ಗಂಗನಹಳ್ಳಿ ಮತ್ತು ಇತರರು ಉಪಸ್ಥಿತರಿದ್ದರು.




# ದಮನಿತರ ಏಳಿಗೆಗಾಗಿ ಮಿಡಿದ ಕಾಂಗ್ರೆಸ್ :ಸಚಿವ ತಿಮ್ಮಾಪುರ



**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದಲ್ಲಿ ಮಂಗಳವಾರ ಮಾದಿಗ ಸಮುದಾಯದ ಬೃಹತ್ ಸಭೆ ನಡೆಸಿ, ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಪರ ಮತ ಯಾಚಿಸಲಾಯಿತು.

ಈ ವೇಳೆ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಅವರು ಮಾತನಾಡಿ, ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳಿಂದ ನಿಮಗೆಲ್ಲ ಅನುಕೂಲವಾಗಿದೆ. ನಿಮ್ಮ ಮಕ್ಕಳು ಸುಶಿಕ್ಷಿತರಾಗಲು ಸರಕಾರ ಶ್ರಮಿಸಿದೆ. ದಮನಿತರ ಏಳಿಗೆಗಾಗಿ ಕಾಂಗ್ರೆಸ್ ಯಾವತ್ತೂ ಮಿಡಿದಿದೆ. ಬಿಜೆಪಿ ಅಭ್ಯರ್ಥಿ ಮತ್ತು ಆ ಪಕ್ಷದಿಂದ ನಿಮಗೆ ಇಲ್ಲಿಯವರೆಗೆ ಯಾವುದೇ ಲಾಭವಾಗಿಲ್ಲ ಎಂದರು.

ಹಿಂದುತ್ವ ಬಿಜೆಪಿಯವರ ಮನೆ ಆಸ್ತಿ ಅಲ್ಲ. ಹಿಂದುಳಿತ ಜಾತಿಯವರ ಮತ ಕೇಳಲು ಸಂವಿಧಾನ ವಿರೋಧಿ ಜನಕ್ಕೆ ನೈತಿಕತೆ ಇಲ್ಲ. ವಿಶ್ವದಲ್ಲಿ ಗೋಮಾಂಸ ರಫ್ತಿನಲ್ಲಿ ಎರಡನೇ ಸ್ಥಾನದಲ್ಲಿರುವ ಭಾರತದಲ್ಲಿ ಮೊದಲು ಕಸಾಯಿಖಾನೆ ಬಂದ್ ಮಾಡಿ ಗೋಮಾತೆ ಬಗ್ಗೆ ನಿಜವಾದ ಪ್ರೀತಿ ತೋರಿಸಿ. ಚೀನಾ ಭೂಮಿ ಅತಿಕ್ರಮಿಸಿದೆ. ನಮ್ಮ ಪ್ರಧಾನಿ ದುರ್ಬಲ, ಅವರು ಯುವಕರ ತಲೆಕೆಡಿಸುತ್ತಾರೆ. ಇದೆಲ್ಲಕ್ಕೂ ಭಿನ್ನವಾಗಿರುವ ದಲಿತಪರ, ಜೀವಪರ ವ್ಯಕ್ತಿಯಾದ ಆಲಗೂರಗೆ ಮತ ಹಾಕಿ ಎಂದು ಕೋರಿದರು.

ಜಿಲ್ಲಾ ಉಸ್ತುವಾರಿ, ಕೈಗಾರಿಕೆ ಸಚಿವ ಎಂ. ಬಿ. ಪಾಟೀಲ ಮಾತನಾಡಿ, ಕಾಂಗ್ರೆಸ್ ತನ್ನ ಅಧಿಕಾರಾವಧಿಯಲ್ಲಿ ಭಾರತವನ್ನು ಸರ್ವಾಂಗೀಣ ಅಭಿವೃದ್ಧಿ ಮಾಡಿದೆ. ಈ ದೇಶವನ್ನು ಸೂಜಿಯಿಂದ ವಿಮಾನಯಾನ, ಶಾಲೆಯಿಂದ ವಿಶ್ವವಿದ್ಯಾಲಯಗಳವರೆಗೆ ಕಟ್ಟಲಾಗಿದೆ. ರಾಜ್ಯದಲ್ಲೂ ನಮ್ಮ ಸರಕಾರ ನಿಮ್ಮ ಪ್ರಗತಿಪರವಾಗಿದೆ. ಇಲ್ಲಿ ಆಲಗೂರರು ತಮ್ಮೆಲ್ಲರ ಅಭಿವೃದ್ಧಿಗೆ ಶ್ರಮಿಸಲಿದ್ದಾರೆ ಎಂದರು.

ಅಭ್ಯರ್ಥಿ ಪ್ರೊ.ರಾಜು ಆಲಗೂರ ಮಾತನಾಡಿ, ಕನಸಲ್ಲೂ ನಾನು ಎಡ-ಬಲ ಸಮಾಜ ಎಂದು ಬೇರೆ ಮಾಡಿಲ್ಲ. ನಾನು ಒಂದು ಪಂಗಡಕ್ಕೆ ಮಾತ್ರ ಸೀಮಿತವಾಗಲು ಇಚ್ಛಿಸುವುದಿಲ್ಲ. ಇದು ರಾಜಕಾರಣಕ್ಕಾಗಿ ನಾನು ಹೇಳುತ್ತಿಲ್ಲ. ನಿಮ್ಮ ಜೊತೆ ನಾನು ಯಾವತ್ತೂ ಇರುವೆ ಎಂದರು.

ಹಿರಿಯ ಮುಖಂಡ ಚಂದ್ರಶೇಖರ ಕೊಡಬಾಗಿ, ನಿವೃತ್ತ ಐಆರ್‌ಎಸ್ ಅಧಿಕಾರಿ ಎಚ್.ಆರ್. ಭೀಮಾಶಂಕರ ವೇದಿಕೆಯಲ್ಲಿ ಇದ್ದರು.

ಪಕ್ಷದ ಎಸ್‌ಸಿ ಘಟಕದ ಅಧ್ಯಕ್ಷ ರಮೇಶ ಗುಬ್ಬೇವಾಡ ಪ್ರಾಸ್ತಾವಿಕ ಮಾತನಾಡಿದರು.

ಸುಭಾಶ ಕಾಲೇಬಾಗ, ಕೆ.ಕೆ.ಕಳಸದ ಸೇರಿದಂತೆ ಹಲವಾರು ಮುಖಂಡರು, ಸಮುದಾಯದ ಪ್ರಮುಖರು ಇದ್ದರು.

ಸಾಲಮನ್ನಾ-ವಿಮೆ-ಕೆರೆಗೆ ನೀರು-ಕಬ್ಬಿನ ಬಿಲ್-ಜಾನುವಾರಗಳಿಗೆ ಮೇವು ಒದಗಿಸಲು ಆಗ್ರಹ

# ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತಸಂಘ ಮನವಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮುಂಗಾರು, ಹಿಂಗಾರು ಸಂಪೂರ್ಣ ಕೈಕೊಟ್ಟಿರುವುದರಿಂದ ನಾಡಿನ ರೈತಕುಲ ಸಂಕಷ್ಟಕ್ಕೆ ಸಿಲುಕಿದಂತಾಗಿದೆ. ಈ ವರ್ಷದ ಅತೀ ಹೆಚ್ಚು ಬಿಸಿಲಿನ ಕಾರಣದಿಂದ ಜನ ಜಾನುವಾರುಗಳು ಹನಿ ನೀರಿಗಾಗಿ ಪರದಾಡುವಂತಾಗಿದೆ. ಆದ್ದರಿಂದ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ರಾಜ್ಯ ಹಾಗೂ ಕೇಂದ್ರ ಸರಕಾರ ಬರ ಪರಿಹಾರ ಕೊಡಬೇಕು, ಕುಡಿಯಲು ನೀರು ಹಾಗೂ ಮೇವಿನ ವ್ಯವಸ್ಥೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷ ಚುನಪ್ಪಾ ಪೂಜಾರಿ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರಿಗೆ ಮನವಿ ಸಲ್ಲಿಸಲಾಯಿತು.

ಮಂಗಳವಾರ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲೆಯ ಎಲ್ಲಾ 13 ತಾಲೂಕುಗಳಿಂದ ಆಗಮಿಸಿದ ರೈತರು ನಗರದ ಗಾಂಧಿ ವೃತ್ತದಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ, ರಾಜ್ಯ ಮತ್ತು ಕೇಂದ್ರ ಸರಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಬಸವೇಶ್ವರ ವೃತ್ತದ ಮಾರ್ಗವಾಗಿ ಅಂಬೇಡ್ಕರ ವೃತ್ತದಲ್ಲಿ ಜಮಾಯಿಸಿ ಹೋರಾಟ ಮಾಡಿದರು, ನಂತರ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರು ಮನವಿ ಸ್ವೀಕರಿಸಿ ನಮ್ಮ ವ್ಯಾಪ್ತಿಯಲ್ಲಿ ಬಗೆಹರಿಸಬಹುದಾದ ಎಲ್ಲಾ ಬೇಡಿಕೆಗಳನ್ನು ಬಗೆಹರಿಸುವುದಾಗಿ ಹೇಳಿ ಭರವಸೆ ಕೊಟ್ಟ ನಂತರ ಹೋರಾಟ ಮುಕ್ತಾಯಗೊಳಿಸಲಾಯಿತು.




ಈ ವೇಳೆ ಮಾತನಾಡಿದ ರಾಜ್ಯಾಧ್ಯಕ್ಷ ಚುನಪ್ಪಾ ಪೂಜಾರಿ,

ಜಿಲ್ಲೆಯಲ್ಲಿ ಕುಡಿಯಲು ನೀರು ಹಾಗೂ ಮೇವಿನ ಸಮಸ್ಯೆ ತುಂಬಾ ಇದೆ, ಫಸಲ್ ಭೀಮಾ ಯೋಜನೆಯಲ್ಲಿ ನಡೆಯುತ್ತಿರುವ ಅಕ್ರಮವನ್ನು ತಡೆದು ಮಧ್ಯವರ್ತಿಗಳಿಗೆ ಹೊರಗಿಟ್ಟು ಸರಕಾರವೇ ವಿಮೆಯನ್ನು ತುಂಬಿಸಿಕೊಳ್ಳುವಂತಹ ವ್ಯವಸ್ಥೆ ಮಾಡಿದಾಗ ನಿಜವಾಗಿ ನಷ್ಟಗೊಂಡ ರೈತರಿಗೆ ಪರಿಹಾರ ಸಿಗುವುದು, ವಿದ್ಯುತ್ ಸಮಸ್ಯೆ ಬಗೆಹರಿಸಬೇಕು. ಜೊತೆಗೆ ರಾತ್ರಿ ಸಿಂಗಲ್ ಫೇಸ್ ಕೊಡಬೇಕು, ಇತ್ತಿಚಿಗೆ ಅಕಾಲಿಕ ಗಾಳಿ ಹಾಗೂ ಮಳೆಯಿಂದಾಗಿ ನಷ್ಟಗೊಂಡ ರೈತರಿಗೆ ಸರಿಯಾಗಿ ಪರಿಹಾರ ನೀಡಬೇಕು ಎಂದುಆಗ್ರಹಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಕುಬಕಡ್ಡಿ ಮಾತನಾಡಿ, ಜಿಲ್ಲೆಯ ಎಲ್ಲಾ 9 ಸಕ್ಕರೆ ಕಾರ್ಖಾನೆಗಳಿಂದ ಕಬ್ಬಿನ ಬಾಕಿ ಬಿಲ್ಲು ಬರಬೇಕು, ಆಲಮಟ್ಟಿ ಜಲಾಶಯ ಎತ್ತರಗೊಳ್ಳಬೇಕು. ಇದ-ರಿಂದ ಹೆಚ್ಚುವರಿ 130 ಟಿ.ಎಂ.ಸಿ ನೀರು ಉಳಿಯುವುದು. ಇದರಿಂದ ಜಿಲ್ಲೆಯ ಎಲ್ಲಾ ಕೆರೆ ತುಂಬಿ ಅಂರ್ತಜಲ ಹೆಚ್ಚಾಗುವುದು ಎಂದು ವಿವಿಧ ಸಮಸ್ಯೆಗಳ ಕುರಿತು ಮಾತನಾಡಿದರು.

ವಿಜಯಪುರ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 24 ಏತನೀರಾವರಿ ಯೋಜನೆಗಳು ನಡೆಯುತ್ತಿದ್ದು ಎಲ್ಲವೂ ಕಳಪೆ ಮಟ್ಟದಿಂದ ಕೂಡಿದ್ದು, ಯಾವ ಕಾಮಗಾರಿಯೂ ಸಂಪೂರ್ಣ ಮುಗಿದಿಲ್ಲ. ರೈತರಿಗೆ ಬರಬೇಕಾಗಿರುವ ಭೂಸ್ವಾಧೀನದ ಹಣ ಹತ್ತು ವರ್ಷಗಳಾದರೂ ಇನ್ನು ಬಂದಿಲ್ಲ, ಬೂದಿಹಾಳ-ಪೀರಾಪುರ, ಚಿಮ್ಮಲಗಿ, ತುಬಚಿ ಬಬಲೇಶ್ವರ, ಮುಳವಾಡ, ರೇವಣ ಸಿದ್ದೇಶ್ವರ ಏತನೀರಾವರಿ ಯೋಜನೆಯಡಿ ರೈತರಿಗೆ ಭೂ ಪರಿಹಾರದ ಹಣ ಇನ್ನುವರೆಗೂ ಬಂದಿಲ್ಲ, ಆದ್ದರಿಂದ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ರೈತರಿಗೆ ಹಣ ಕೊಡದೇ ಯಾರಿಗೂ ಕಾಮಗಾರಿ ಮಾಡದಂತೆ ಕೆ.ಬಿ.ಜೆ.ಎನ್.ಎಲ್ ಅಧಿಕಾರಿಗಳಿಗೆ ಆದೇಶಿಸಬೇಕು ಎಂದು ಆಗ್ರಹಿಸಿದರು.

ಕೋಲಾರ ಅಧ್ಯಕ್ಷ ಸೋಮು ಬಿರಾದಾರ, ಮಹಿಳಾ ಜಿಲ್ಲಾಧ್ಯಕ್ಷೆ ರೇಖಾ ಪಾಟೀಲ, ದೇವರ ಹಿಪ್ಪರಗಿ ತಾಲೂಕಾ ಅಧ್ಯಕ್ಷ ಈರಪ್ಪ ಕುಳೆಕುಮಟಗಿ, ಸಿ.ಎಸ್.ಪ್ಯಾಠಿ, ಶಾನೂರ ನಂದರಗಿ, ಸಂಪತ್ತ ಜಮಾದಾರ ಮಾತನಾಡಿದರು.

ಈ ವೇಳೆ ರಾಜ್ಯ ಕಾರ್ಯಾಧ್ಯಕ್ಷ ರಾಜು ಪವಾರ, ಬಬಲೇಶ್ವರ ತಾಲೂಕಾ ಆದ್ಯಕ್ಷ ಮಕಬುಲ ಕಿಜಿ, ಇಂಡಿ ಅಧ್ಯಕ್ಷ ಹೆಚ್ ಎಮ್ ಪೂಜಾರಿ, ತಾಳಿಕೋಟಿ ಅಧ್ಯಕ್ಷ ಶ್ರೀಶೈಲ ವಾಲಿಕಾರ, ವಿಜಯಪುರ ತಾಲೂಕಾ ಅಧ್ಯಕ್ಷ ಅರುಣಗೌಡ ತೇರದಾಳ, ಶಿವಾನಂದಯ್ಯ ಹಿರೇಮಠ, ಹಣಮಂತ ಬ್ಯಾಡಗಿ, ರಾಜುಗೌಡ ಬಿರಾದಾರ, ಸಂಗಪ್ಪ ಟಕ್ಕೆ, ಅಲೋಕ ಬೈರಾಮಡಿ, ರಾಮನಗೌಡ ಪಾಟೀಲ, ಪ್ರಕಾಶ ತೇಲಿ, ಸಂಗಪ್ಪ ಚಲವಾದಿ, ಸಂಗಮೇಶ ಹುಣಸಗಿ, ನಜೀರ ನಂದರಗಿ, ಮಹದೇವ ಕದಮ್, ಮಹಾದೇವಪ್ಪ ತೇಲಿ, ಮಲ್ಲಿಕಾರ್ಜುನ ಗೋಡೆಕರ, ಮಹಾತೇಂಶ ಮಮದಾಪುರ, ಕಲ್ಲಪ್ಪ ಪಾರಶೆಟ್ಟಿ, ಪ್ರಭು ಕಾರಜೋಳ, ಸುಭಾಸ ಸಜ್ಜನ, ಶಶಿಕಾಂತ ಬಿರಾದಾರ, ಸತೀಶ ಕುಲ್ಲೊಳ್ಳಿ, ಮಹಿಬೂಬ ಬಾಷಾ ಮನಗೂಳಿ, ಸೇರಿದಂತೆ ನೂರಾರು ಜನ ಇದ್ದರು

# ಭಾವಿಯಲ್ಲಿ ಈಜಲು ಹೋದ ವಿದ್ಯಾರ್ಥಿಗಳಿಬ್ಬರ ಸಾವು

**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಸಿಂದಗಿ ತಾಲೂಕಿನ ಗೋಲಗೇರಿ ಗ್ರಾಮದಲ್ಲಿ ವಿದ್ಯಾರ್ಥಿಗಳಿಬ್ಬರು ಗೆಳೆಯರೊಂದಿಗೆ ಭಾವಿಯಲ್ಲಿ ಈಜಲು ಹೋಗಿ ಸಾವನ್ನಪ್ಪಿದ ಘಟನೆ ಮಂಗಳವಾರ ನಡೆದಿದೆ.






ಗ್ರಾಮದ ಶ್ರೀ ಸಿದ್ದರಾಮ ಸ್ವಾಮೀಜಿ ಕಾಲೇಜಿನ ಪಿಯುಸಿ ವಿದ್ಯಾರ್ಥಿ ಸೋಮಶೇಖರ ಅಶೋಕ ಆಲಮೇಲ (17), ಮಂಗಳೂರಲ್ಲಿ ಎಸ್ಸೆಸ್ಸೆಲ್ಸಿ ಓದುತ್ತಿದ್ದ ಗ್ರಾಮದ ವಿದ್ಯಾರ್ಥಿ ಮಲೀಕ್ ಹಷನಸಾಬ ನದಾಫ್ ( 17) ಮೃತಪಟ್ಟಿದ್ದಾರೆ.

ಕಲಕೇರಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಇಂದು ತಾಳಿಕೋಟೆಗೆ ಸಚಿವ ರಾಮಲಿಂಗಾರೆಡ್ಡಿ



**ಉದಯರಶ್ಮಿ ನ್ಯೂಸ್**

ತಾಳಿಕೋಟಿ: ಕರ್ನಾಟಕ ಸರಕಾರದ ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾ ರೆಡ್ಡಿ ಅವರು ಮೇ1ರಂದು ತಾಳಿಕೋಟಿ ಪಟ್ಟಣಕ್ಕೆ ಆಗಮಿಸಲಿದ್ದಾರೆಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೆಬೂಬ ಚೋರಗಸ್ತಿ ಅವರು ತಿಳಿಸಿದ್ದಾರೆ. ಮಧ್ಯಾಹ್ನ 12:00 ಘಂಟೆಗೆ ಪಟ್ಟಣದ ಶ್ರೀ ಸಂಗಮೇಶ್ವರ ನೂತನ ಸಭಾ ಭವನದಲ್ಲಿ ಹಮ್ಮಿಕೊಂಡ ತಾಳಿಕೋಟಿ ತಾಲೂಕಿನ ವೀರಶೈವ ಲಿಂಗಾಯತ ಸಮಾಜ ಬಾಂಧವರ ಸಭೆಯಲ್ಲಿ ಭಾಗವಹಿಸುವ ಅವರು ವಿಜಯಪುರ ಲೋಕಸಭಾ ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಇವರ ಪರ ಮತಯಾಚನೆ ಮಾಡಲಿದ್ದಾರೆ. ಮುದ್ದೇಬಿಹಾಳ ಮತಕ್ಷೇತ್ರದ ಶಾಸಕ ಹಾಗೂ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ .ಎಸ್. ನಾಡಗೌಡ (ಅಪ್ಪಾಜಿ) ಸಭೆಯ ಅಧ್ಯಕ್ಷತೆಯನ್ನು ವಹಿಸುವರು. ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಅವರು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಬಿಜೆಪಿ ಪ್ರಶ್ನೆಗಳಿಗೆ ನಮ್ಮ ಅಭಿವೃದ್ಧಿ ಯೋಜನೆಗಳೇ ಉತ್ತರ :ಎಂ.ಬಿ.ಪಾಟೀಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕಾಂಗ್ರೆಸ್ ರೈತರು, ಬಡವರು, ಜನಸಾಮಾನ್ಯ-ರಿಗೆ ಸ್ವಾವಲಂಬಿಯಾಗಿ ಬದುಕಲು ಅಭಿವೃದ್ಧಿ ಯೋಜನೆಗಳ ಮೂಲಕ ಶಕ್ತಿ ತುಂಬುತ್ತಿದೆ ಎಂದು ಕೈಗಾ-ರಿಕೆ, ಮೂಲಸೌಲಭ್ಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಮಂಗಳವಾರ ತಿಕೋಟಾ ತಾಲೂಕಿನ ಟಕ್ಕಳಕಿ ಮತ್ತು ಜಾಲಗೇರಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಪರ ಪ್ರಚಾರ ಕೈಗೊಂಡು ಅವರು ಮಾತನಾಡಿದರು.



ಮುಂಬರುವ ದಿನಗಳಲ್ಲಿ ಟಕ್ಕಳಕಿ ಮತ್ತು ಜಾಲಗೇರಿ ಸುತ್ತಲಿನ ಉಳಿದ ಭಾಗಕ್ಕೆ ನೀರಾವರಿ ಸೌಲಭ್ಯ ಒದಗಿಸಲಾಗುವುದು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಈ ಭಾಗದಲ್ಲಿ ಹೊಲಗಾಲುವೆ ನಿರ್ಮಿಸಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದ್ದು, ಮುಂದಿನ ಆರು ತಿಂಗಳಲ್ಲಿ ಈ ಭಾಗದ ರೈತರ ಜಮೀನುಗಳಿಗೆ ನೀರು ಹರಿಸಲಾಗುವುದು. ಕಾಂಗ್ರೆಸ್ ರೈತರು, ಬಡವರು, ಜನಸಾಮಾನ್ಯ-ರಿಗೆ ಸ್ವಾವಲಂಬಿಯಾಗಿ ಬದುಕಲು ಅಭಿವೃದ್ಧಿ ಯೋಜನೆಗಳ ಮೂಲಕ ಶಕ್ತಿ ತುಂಬುತ್ತಿದೆ. ಕಾಂಗ್ರೆಸ್ ಸ್ವಾತಂತ್ರ್ಯದ ಹೋರಾಟಕ್ಕಾಗಿ ಉದಯಿಸಿದ ಪಕ್ಷ. ಆದರೆ, ಬಿಜೆಪಿ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡಿಲ್ಲ. ಅದು ಬ್ರಿಟೀಷರ ಪರವಾಗಿದ್ದ ಪಕ್ಷ. ಬಿಜೆಪಿಯವರು ಪ್ರಶ್ನೆಗಳಿಗೆ ನಮ್ಮ ಅಭಿವೃದ್ಧಿ ಯೋಜನೆಗಳು ಉತ್ತರವಾಗಿವೆ. ಕಾಂಗ್ರೆಸ್ ದೇಶಕ್ಕಾಗಿ ಏನು ಮಾಡಿದೆ? ಎಂದು ಕೇಳುವ ಬಿಜೆಪಿಗರಿಗೆ ಪ್ರೊ.ರಾಜು ಆಲಗೂರ ಅವರಿಗೆ ಮತ ಹಾಕುವ ಮೂಲಕ ಮೂಲಕ ತಕ್ಕ ಪಾಠ ಕಲಿಸಬೇಕು ಎಂದು ಅವರು ಕರೆ ನೀಡಿದರು.

ಸಂಸದ ರಮೇಶ ಜಿಗಜಿಣಗಿ ಏನೂ ಕೆಲಸ ಮಾಡಿಲ್ಲ. ಜಿಲ್ಲೆಯ ಪರ ಸಂಸತ್ತಿನಲ್ಲಿ ಧ್ವನಿ ಎತ್ತಿಲ್ಲ. ಕಾಂಗ್ರೆಸ್ ತ್ಯಾಗ ಬಲಿದಾನಗಳ ಪಕ್ಷ. ಬಿಜೆಪಿ ಬ್ರಿಟೀಷರ ಪರವಾಗಿದ್ದ ಪಕ್ಷ. ಭಾರತದೊಂದಿಗೆ ಸ್ವಾತಂತ್ರ್ಯ ಹೊಂದಿರುವ ಅನೇಕ ರಾಷ್ಟ್ರಗಳು ಇನ್ನೂ ಅಭಿವೃದ್ಧಿಯಾಗದೇ ಆಹಾರ ಹೆಣಗಾಡುತ್ತಿವೆ. ಆದರೆ, ಸ್ವಾತಂತ್ರ್ಯದ ನಂತರ ಕಾಂಗ್ರೆಸ್ ಅಭಿವೃದ್ಧಿಗೆ ಭದ್ರ ಬುನಾದಿ ಹಾಕಿದ್ದರಿಂದ ಭಾರತ ಇಂದು ಸದೃಢವಾಗಿ ನಿಂತಿದೆ. ಮೋದಿ ಪೊಳ್ಳು ಭರವಸೆ ಬಗ್ಗೆ ಯುವಕರು ಸೇರಿದಂತೆ ಎಲ್ಲ-ರಿಗೂ ಅರಿವಾಗಿದ್ದು, ಈ ಬಾರಿ ಜಾಗೃತರಾಗಿದ್ದಾರೆ. ಕಾಂಗ್ರೆಸ್ ಪರವಾಗಿದ್ದಾರೆ. ನ್ಯಾಯಕ್ಕಾಗಿ ಹೋರಾಟ ನಡೆಸಿದ ರೈತರ ಹೋರಾಟವನ್ನು ಲಾಠಿ ಬಳಸಿ ಜಲಫಿರಂಗಿ ಉಪಯೋಗಿಸಿ ಹತ್ತಿಕ್ಕಲಾಯಿತು. ಎಲೆಕ್ಟ್ರಾಲ್ ಬಾಂಡ್ ವಿಷಯದಲ್ಲಿ ಅವುಗಳನ್ನು ಖರೀದಿಸಿದವರ ಹೆಸರನ್ನು ಗೌಪ್ಯವಾಗಿಟ್ಟು ದೊಡ್ಡ ಹಗರಣ ಮಾಡಿದರು. ಸುಪ್ರೀಂ ಕೋರ್ಟಿನ ಆದೇಶದ ನಂತರ ಬಾಂಡ್ ಖರೀದಿಸಿದವರ ಹೆಸರುಗಳು ಬಹಿರಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಾಮಾಣಿಕತೆಯ ಮುಖವಾಡ ಕಳಚಿದೆ. ಹೀಗಾಗಿ ಈಗ ಮೋದಿ ಭ್ರಷ್ಟಾಚಾರ ಪ್ರಸ್ತಾಪ ಬಿಟ್ಟು ಭಾವನಾತ್ಮಕ ವಿಚಾರ ಮುಂದಿಟ್ಟುಕೊಂಡು ಮತ ಕೇಳುತ್ತಿದ್ದಾರೆ ಎಂದು ಅವರು ಹೇಳಿದರು.

ನಾವು 2013-18 ರ ಅವಧಿಯಲ್ಲಿ ನೀರಾವರಿ ಮಾಡಿ ರೈತರ ಆದಾಯ ದ್ವಿಗುಣ ಮಾಡಿದ್ದೇವೆ. ಒಂದು ಕಾಲದಲ್ಲಿ 711 ಟ್ಯಾಂಕರ್ ನೀರು ಪೂರೈಕೆಯಾಗುತ್ತಿದ್ದ ವಿಜಯಪುರ ಜಿಲ್ಲೆಯಲ್ಲಿ ಈಗ ನಾವು ಕೈಗೊಂಡಿರುವ ನೀರಾವರಿ ಯೋಜನೆಗಳಿಂದಾಗಿ ಕೇವಲ 38 ಟ್ಯಾಂಕರ್ ಬಳಕೆಯಾಗುತ್ತಿವೆ. ಅದನ್ನು ಮುಂದಿನ ಆರು ತಿಂಗಳಲ್ಲಿ 10ಕ್ಕೆ ಇಳಿಸುತ್ತೇವೆ. ಈ ಭಾಗದಲ್ಲಿ ಬಾಕಿ ಉಳಿದಿರುವ ರೈತರ ಜಮೀನಿಗೆ ನೀರು ಹರಿಸಲು ಹೊಲಗಾಲುವೆ ಕಾಮಗಾರಿ ಪ್ರಾರಂಭವಾಗಲಿದೆ. ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಮತ್ತು ಬಸವನಾಡಿನ ಜನರ ಆಶೋತ್ತರಗಳಿಗೆ ಸ್ಪಂದಿಸಿ ಸಂಸತ್ತಿನಲ್ಲಿ ಧ್ವನಿ ಎತ್ತಿ ಕೆಲಸ ಮಾಡಲು ಪ್ರೊ. ರಾಜು ಆಲಗೂರ ಅವರನ್ನು ಆಯ್ಕೆ ಮಾಡುವ ಮೂಲಕ ಬದಲಾವಣೆ ತರಬೇಕು. ಪ್ರಾಮಾಣಿಕವಾಗಿ ದುಡಿದವರಿಗೆ ನಿಯತ್ತಿನಿಂದ ಮತಹಾಕಿ ಗೆಲ್ಲಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸೀನಾ ರಾಮಣ್ಣ ರಾಠೋಡ, ಪ್ರಶಾಂತ ಝುಂಡೆ, ಗೀತಾಂಜಲಿ ಪಾಟೀಲ ಮತ್ತು ಅನೀಲ ಚವ್ಹಾಣ ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರ ನೀರಾವರಿ ಯೋಜನೆಗಳಿಂದಾಗಿ ಗಡಿ ಭಾಗದಲ್ಲಿರುವ ನಮ್ಮ ಗ್ರಾಮಗಳಲ್ಲಿ ಕ್ಷೀರ ಕ್ರಾಂತಿಯಾಗಿದ್ದು, ಟಕ್ಕಳಕಿ ಹಾಲು ಉತ್ಪಾದಕರ ಸಂಘ ವಿಜಯಪುರ- ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರಥಮ ಸ್ಥಾನ ಪಡೆದಿದೆ. ಈ ಭಾಗದಲ್ಲಿ ನಿರುದ್ಯೋಗಿ ಯುವಕರು ಕೃಷಿ, ತೋಟಗಾರಿಕೆ ಮತ್ತು ಹೈನುಗಾ-ರಿಕೆಯಲ್ಲಿ ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿ ಬದುಕು ಸಾಗಿಸುತ್ತಿದ್ದಾರೆ. ನಮ್ಮ ಸಚಿವರು ಮಾಡಿರುವ ಅಭಿವೃದ್ಧಿ ಕಾರ್ಯಗಳು ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರ ಗೆಲುವಿನಲ್ಲಿ ಕಾರಣವಾಗಲಿವೆ. ಎಲ್ಲರೂ ಅವರನ್ನು ಬೆಂಬಲಿಸುವ ಮೂಲಕ ಸಚಿವರ ಕೈ ಬಲಪಡಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಿಕೋಟಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದು ಗೌಡನವರ, ಮಧುಕರ ಜಾಧವ, ವಿಠ್ಠಲ ಪೂಜಾರಿ, ಪೋಪಟ ಮಹಾರಾಜರು, ಬಾಳು ಮಹಾರಾಜರು, ಪಿಂಟೂ ಮಹಾರಾಜರು, ರಾಮಣ್ಣ ಮಾಳಿ, ಗೀತಾಂಜಲಿ ಪಾಟೀಲ, ರಾಜುಗೌಡ ಪೊಲೀಸ್ ಪಾಟೀಲ, ರಾಘು ಕುಲಕರ್ಣಿ, ವಾಮನ ಚವ್ಹಾಣ, ಭೀಮರಾಯಗೌಡ ಪಾಟೀಲ, ಸತೀಶ ನಾಯಕ, ಉತ್ತಮ ಝುಂಡೆ, ಶಿವಪ್ಪ ಚಲವಾದಿ, ಸಂಜು ಪವಾರ, ಆತ್ಮಾರಾಮ ಕಾಟಕರ, ಅನುಬಾಯಿ ಬಾಳು ರಾಠೋಡ, ಅಪ್ಪು ದಳವಾಯಿ, ರಾಜು ಪವಾರ, ತಾವರು ರಾಠೋಡ, ಓಗೆಪ್ಪ ಗೋಪಣೆ, ಈರನಗೌಡ ಬಿರಾದಾರ, ಧನಸಿಂಗ ಚವ್ಹಾಣ, ಬೂತಾಳಸಿದ್ದ ಒಡೆಯರ, ಅನೀಲ ಚವ್ಹಾಣ ಮುಂತಾದವರು ಉಪಸ್ಥಿತ-ರಿದ್ದರು.

ಟಕ್ಕಳಕಿ ಗ್ರಾಮದಲ್ಲಿ ಹುಬನೂರ ಎಲ್. ಟಿ. -1 ರ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಪಕ್ಷ ತೊರೆದು ಕಾಂಗ್ರೆಸ್ಸಿಗೆ ಸೇರ್ಪಡೆಯಾದರು.

## ರಿಪಬ್ಲಿಕ್ ಪಕ್ಷದ ಅಭ್ಯರ್ಥಿ ಜಿತೇಂದ್ರ ಕಾಂಬಳೆ ಘೋಷಣೆ

# ಆಲಮಟ್ಟಿ ಆಣೆಕಟ್ಟು ಎತ್ತರ 524 ಮೀ ಹೆಚ್ಚಿಸಲು ಒತ್ತು

**ಉದಯರಶ್ಮಿ ನ್ಯೂಸ್**

ಇಂಡಿ: ಸಧ್ಯ ಆಲಮಟ್ಟಿ ಆಣೆಕಟ್ಟಿನ ಎತ್ತರ 519 ಮೀ. ಇದ್ದು ನಾನು ಸಂಸದನಾಗಿ ಆಯ್ಕೆಯಾದರೆ 524 ಮೀ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದು ರಿಪಬ್ಲಿಕ್ ಪಕ್ಷದ ಅಭ್ಯರ್ಥಿ ಜಿತೇಂದ್ರ ಕಾಂಬಳೆ ಹೇಳಿದರು.



ಅವರು ಮಂಗಳವಾರ ಪಟ್ಟಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಇಂಡಿ ತಾಲೂಕು ಮೇಲಿಂದ ಮೇಲೆ ಬರಗಾಲಕ್ಕೆ ತುತ್ತಾಗುತ್ತಿದ್ದು ಈ ಭಾಗದ ಕೆಲವು ಪ್ರದೇಶ ನೀರಾವರಿಯಿಂದ ವಂಚಿತವಾಗಿದೆ. ಈ ಭಾಗದ ರೈತರ ಜೀವನ ಹಸನಾಗಿಸಲು ಆಲಮಟ್ಟಿ ಆಣೆಕಟ್ಟಿನ ಎತ್ತರ 524 ಮೀ ಆಗಲು ಪ್ರಯತ್ನಿಸುವೆ ಎಂದರು.

ಆಲಮಟ್ಟಿ ಆಣೆಕಟ್ಟು ಎತ್ತರ 524 ಮೀ ಆದರೆ ವಿಜಯಪುರ ಭಾಗದ ಗುತ್ತಿ ಬಸವಣ್ಣ, ಮುಳವಾಡ, ರೇವಣಸಿದ್ದೇಶ್ವರ, ಇಂಡಿ ಶಾಖಾ ಕಾಲುವೆ,ಚಿಮ್ಮಲಗಿ ಯೋಜನೆ ಎಲ್ಲ ಕಾಲುವೆಗಳಲ್ಲಿ ಮತ್ತು ಇಂಡಿ ತಾಲೂಕಿನ ಕಾಲುವೆಯ ಕೊನೆಯ ಭಾಗದವರಿಗೂ ನೀರು ಬರುತ್ತದೆ ಎಂದರು.

ನಮ್ಮ ದೇಶವು ಪ್ರಜಾ ಸತ್ತಾತ್ಮಕ ಮತ್ತು ಜಾತ್ಯಾತೀತ ರಾಷ್ಟ್ರವಾಗಿದೆ. ನಮ್ಮ ಸಂವಿಧಾನವನ್ನು ಬದಲಾಯಿಸುವ ಸಂಚು ನಡೆದಿದ್ದು ಹಾಗಾದರೆ ನಾವು ರಕ್ತ ಹರಿಸಲು ಸಿದ್ಧ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಆರ್.ಪಿ.ಐ ಜಿಲ್ಲಾ ಉಪಾಧ್ಯಕ್ಷ ಪರಶುರಾಮ ಚಲವಾದಿ, ಜಿಲ್ಲಾ ಕಾರ್ಯದರ್ಶಿ ಸುಖದೇವ ಮೇಲಿನಕೇರಿ, ತಾಲೂಕಾ ಅಧ್ಯಕ್ಷ ಚಂದ್ರು ಮೇಲಿನಮನಿ, ತಾಲೂಕಾ ಕಾರ್ಯದರ್ಶಿ ಪರಶುರಾಮ ಉಕ್ಕಲಿ ಮತ್ತಿತರಿದ್ದರು.

# ದೇಶಭಕ್ತಿ ಮೋದಿಯವರಿಗೆ ಗುತ್ತಿಗೆ ಕೊಟ್ಟಿಲ್ಲ :ಸವದಿ

**ಉದಯರಶ್ಮಿ ನ್ಯೂಸ್**



ಇಂಡಿ: ದೇಶ ಭಕ್ತಿಯನ್ನು ಬಿಜೆಪಿಯವರಿಗೆ ಹಾಗೂ ಪ್ರಧಾನಿಗೆ ಗುತ್ತಿಗೆ ಕೊಟ್ಟಿಲ್ಲ. ನಾವು ಕೂಡ ದೇಶ ಭಕ್ತರೇ ಎಂದು ಕಾಂಗ್ರೆಸ್ ಪಕ್ಷದ ಸ್ಟಾರ್ ಕಂಪೆನರ್, ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ತಾಲೂಕಿನ ತಾಂಬಾದಲ್ಲಿ ನಡೆದ ಬೃಹತ್ ಪ್ರಚಾರ ಸಭೆಯಲ್ಲಿ ಮಾತನಾಡಿ, ದೇಶ ಉಳಿಸಿ ಬೆಳೆಸಿದವರ ಕೊಡುಗೆ ಬಹಳವಿದೆ. ಈಗ ಹತ್ತು ವರ್ಷದಿಂದ ದೇಶ ಪ್ರೇಮವನ್ನು ಕಲಿಸಿಕೊಡಲಾಗುತ್ತಿದೆ. ಮೋದಿಯವರ ರೊಟ್ಟಿ ತವೆ ಮೇಲೆ ಹೊತ್ತುತ್ತಿದೆ. ಅದನ್ನು ತಿರುವಿ ಹಾಕಬೇಕು ಎಂದು ಮಾರ್ಮಿಕವಾಗಿ ಹೇಳಿದರು.

ನೀವು ರಾಜು ಆಲಗೂರರಿಗೆ ಓಟು ಹಾಕಿ ಎನ್ನಲು ನಮಗೆ ನೈತಿಕ ಹಕ್ಕಿದೆ. ನಮ್ಮ ಅಭ್ಯರ್ಥಿ ಅಭಿವೃದ್ಧಿ ಪರ ಚಿಂತಕರಾಗಿದ್ದಾರೆ. ನೀವು ಈ ಸಲ ಬದಲಾವಣೆ ತನ್ನಿ, ದೇಶದಲ್ಲೂ ಬದಲಾವಣೆ ಖಂಡಿತ ಆಗಲಿದೆ. ಯಾವ ಕೆಲಸವೂ ಮಾಡದೇ ಇರುವ ಕಾರಣ ಮೋದಿಯವರ ವರ್ಚಸ್ಸು ಮುಗಿದಿದೆ ಎಂದು ಹೇಳಿದರು.

ಪಕ್ಷದ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರು ಮಾತನಾಡಿ, ರಾಜ್ಯದ ಸಿದ್ದರಾಮಯ್ಯ ಸರಕಾರ ಬಸವಣ್ಣನವರನ್ನು ಸಾಂಸ್ಕೃತಿ-ಕ ನಾಯಕ ಎಂದು ಘೋಷಣೆ ಮಾಡಿ ಬಹು ದೊಡ್ಡ ಕೆಲಸ ಮಾಡಲಾಗಿದೆ. ನಾವು ಬಸವ ನಾಡಿನವರು, ಕಾಂಗ್ರೆಸ್ ಪಕ್ಷ ಕೂಡ ಬಸವಣ್ಣನವರ ಹಾದಿಯಲ್ಲಿ ನಡೆಯುತ್ತಿದೆ. ಪ್ರಜಾಪ್ರಭುತ್ವ ಉಳಿಸಲು ನಾವೆಲ್ಲ ಶ್ರಮಿಸುತ್ತಿದ್ದೇವೆ. ಈಗಿನ ಕೇಂದ್ರ ಸರ್ಕಾರದ ಮೋದಿ ಹಾಗೂ ಇಲ್ಲಿನ ಸಂಸದ ಜಿಗಜಿಣ-ಗಿಯವರು ಏನೊಂದು ಕೆಲಸ ಮಾಡಿಲ್ಲ. ಬರೀ ಅಧಿಕಾರದಲ್ಲಿ ಇದ್ದದ್ದೇ ಇವರ ಸಾಧನೆಯಾಗಿದೆ. ಈ ಬಾರಿ ಬದಲಾವಣೆ ತಂದರೆ ಜಿಲ್ಲೆಯ ಸಂಪೂರ್ಣ ಅಭಿವೃದ್ಧಿಗೆ ಬದ್ಧ ಎಂದರು.

ಶಾಸಕ ಅಶೋಕ ಮನಗೂಳಿ , ಮಾಜಿ ಶಾಸಕ ಶರಣಪ್ಪ ಸುಣಗಾರ, ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಲೋಣಿ , ವಿಪ ಸದಸ್ಯ ಪ್ರಕಾಶ ರಾಠೋಡ ಮಾತನಾಡಿದರು.

ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯಕ, ಗ್ರಾಪಂ ಅಧ್ಯಕ್ಷ ರಜಾಕ ಚಿಕ್ಕಗಸಿ, ಸಿದ್ದಗೊಂಡ ಪೂಜಾರಿ, ಜಕ್ಕಪ್ಪ ಹತ್ತಳ್ಳಿ, ಮಲ್ಲಣ್ಣ ಸಾಲಿ, ಕಾಮೇಶ ಉಕ್ಕಲಿ, ಗುರಣ್ಣಗೌಡ ಪಾಟೀಲ, ಶ್ರೀಮಂತ ಲೋಣಿ, ಅಪ್ಪಣ್ಣ ಕಲ್ಲೂರ, ಮಹಾದೇವ ಗಡ್ಡದ, ರವಿಕುಮಾರ ಚವ್ಹಾಣ, ಸುರೇಶ ಗೊಣಸಗಿ, ಸಾದಿಕ್ ಸುಂಬಡ, ಚಿಕ್ಕಪ್ಪ, ಸಿದ್ದು ಹತ್ತಳ್ಳಿ, ಬಿ.ಎಂ.ಪಾಟೀಲ, ಅಶೋಕ ಲಾಗಲೋಟಿ ಮತ್ತಿತರಿದ್ದರು.

# ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ವಸ್ತ್ರದ ಜಿಲ್ಲಾ ಪ್ರವಾಸ

**ಉದಯರಶ್ಮಿ ನ್ಯೂಸ್**

ವಿಜಯಪುರ: ರಾಜ್ಯ ಸ್ವೀಪ್ ಸಮೀತಿಯ ನೋಡಲ್ ಅಧಿಕಾರಿ ಪಿ ಎಸ್ ವಸ್ತ್ರದ ಅವರು ಮೇ.1 ರಂದು ವಿಜರಪುರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಸಂಜೆ 4ಗಂಟೆಗೆ ಬೀದರ್ ನಿಂದ ವಿಜಯಪುರಕ್ಕೆ ಆಗಮಿಸಿ ವಿಜಯಪುರ ಜಿಲ್ಲೆಯಲ್ಲಿ ಕಡಿಮೆ ಮತದಾನ ಪ್ರಮಾಣವಿರುವ ಕ್ಲಸ್ಟರ್ ಮತಗಟ್ಟೆಗಳಿಗೆ ಬೇಟಿ ನೀಡಿ ಪರಿಶೀಲನೆ ನಡೆಸುವರು. ನಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮೀತಿ ಅಧಿಕಾರಿಗಳೊಂದಿಗೆ ಸಭೆ ನಡೆಸುವರು.

# ಪ್ರಜಾಪ್ರಭುತ್ವದ ಭದ್ರ ಬುನಾದಿಗೆ ಮತದಾನ ಮುಖ್ಯ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪ್ರಜಾಪ್ರಭುತ್ವದ ಭದ್ರ ಬುನಾದಿಗೆ ಮತದಾನ ಬಹುಮುಖ್ಯ ಪಾತ್ರ ವಹಿಸಿದ್ದು, ಮತದಾನದಿಂದ ಯಾರು ವಂಚಿತರಾಗದೆ ಮೇ-07 ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್.ಎಸ್.ಕಲ್ಮನಿ ಹೇಳಿದರು.

ಪಟ್ಟಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಸೋಮವಾರ ನಡೆದ "ಮತದಾನ ಜಾಗೃತಿ ತಾಲೂಕು ಮಟ್ಟದ ಕಾಲ್ನಡಿಗೆ ಜಾಥಾ"ದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮತಕ್ಷೇತ್ರದ ವ್ಯಾಪ್ತಿಯಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಸ್ವೀಪ್ ಸಮಿತಿಯಿಂದ ಹಲವು ಚಟುವಟಿ-ಕೆಗಳನ್ನು ಹಮ್ಮಿಕೊಳ್ಳಲಾಗಿದೆ. ನಗರ ಹಾಗೂ ಗ್ರಾಮ ಪಂಚಾಯತಿ




ವ್ಯಾಪ್ತಿಯಲ್ಲಿ ಮತದಾರರಿಗೆ ಮತದಾನ ಕುರಿತು ಅರಿವು ಮೂಡಿಸುವುದರ ಜೊತೆಗೆ ಅವರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಈ ಬಾರಿ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವದ ಘನತೆಯನ್ನು ಎತ್ತಿಹಿಡಯಬೇಕು. ಪ್ರತಿಯೊಬ್ಬ ಪ್ರಜೆಗೂ ತನ್ನ ಹಕ್ಕನ್ನು ಚಲಾಯಿಸಲು ಅವಕಾಶ ನೀಡಲಾಗಿದೆ. ಪ್ರಜೆಗಳ ಆಯ್ಕೆಯಿಂದ ಸದೃಢ ಸರ್ಕಾರಗಳ ರಚನೆಯಾಗುತ್ತದೆ. ಆಸೆ, ಆಮಿಷಗಳಿಗೆ ಒಳಗಾಗದೆ ನಿಮ್ಮ ಹಕ್ಕು ಚಲಾಯಿಸಿ ಎಂದು ಸಲಹೆ ನೀಡಿದರು.

ತಹಶೀಲ್ದಾರ ಬಸವರಾಜ ನಾಗರಾಳ ತಾಲೂಕು ಪಂಚಾಯತಿ ಆವರಣದಲ್ಲಿ ಕಾಲ್ನಡಿಗೆ ಜಾಥ-ಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು. ಅಲ್ಲಿಂದ ಶುರುವಾದ ಜಾಥಾ ಕಿತ್ತೂರು ರಾಣಿ ಚನ್ನಮ್ಮ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಬಿ.ಆರ್.ಅಂಬೇಡ್ಕರ್ ವೃತ್ತ, ರಿಲಯನ್ಸ್ ಪೆಟ್ರೋಲ್ ಪಂಪ್, ತಾಳಿಕೋಟೆ ವೃತ್ತ, ಇಂದಿರಾ ವೃತ್ತ, ಬಜಾರ ನಲ್ಲಿರುವ ಗ್ರಾಮ ದೇವತೆ ದೇವಸ್ಥಾನ, ಬಸವೇಶ್ವರ ವೃತ್ತ, ಬಸ್ ನಿಲ್ದಾಣದಲ್ಲಿ ಸಂಚರಿಸಿ ಸಾರ್ವಜನಿಕರಿಗೆ ಮತದಾನದ ಅರಿವು ಮೂಡಿಸಲಾಯಿತು.

ಜಾಥಾದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ಮತದಾನ ಜಾಗೃತಿ ಟ್ಯಾಬ್ಲೋ ಪಾಲ್ಗೊಂಡು ಸಾರ್ವಜನಿಕರ ಗಮನ ಸೆಳೆಯಿತು. ಎಲ್ಲ ಗ್ರಾಮ ಪಂಚಾಯತಿಯ ಸ್ವಚ್ಛ ವಾಹಿನಿಗಳು ಅಲಂಕೃತಗೊಡು ಜಿಂಗಲ್ಸ್ ಗಳನ್ನು ಆಳವಡಿಸಿ ಬೀದಿಗಳಲ್ಲಿ ಸಂಚರಿಸಿದವು. ಪಿಎಸ್ಐ ಸಂಜೀವ ತಿಪರೆಡ್ಡಿ, ಪುರಸಭೆ ಮುಖ್ಯಾಧಿಕಾರಿ ಬಿ.ಎಸ್.ಬಳಗನೂರ, ತಾ.ಪಂ. ಸಹಾಯಕ ನಿರ್ದೇಶಕ ಕೆ.ಎಸ್. ಜಾಧವ, ತಾಲೂಕು ಆರೋಗ್ಯ ಅಧಿಕಾರಿ ಸತೀಶ ತಿವಾರಿ, ಸಾಮಾಜಿಕ ಅರಣ್ಯ ಇಲಾಖೆ ಉಪ ವಲಯ ಅರಣ್ಯಾಧಿಕಾರಿ ಎಸ್.ಜಿ.ಸಂಗಾಲಕ, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿ, ವಿವಿಧ ಇಲಾಖೆಗಳ ಅಧಿಕಾರಿಗಳು-ಸಿಬ್ಬಂದಿ ಜಾಥಾದಲ್ಲಿ ಪಾಲ್ಗೊಂಡಿದ್ದರು.

# ಶ್ರಮಿಕರ ಎದೆಯ ಮೇಲಿನ ಬೆವರ ಹನಿಗಳು..

## ವಿಶ್ವ ಕಾರ್ಮಿಕರ ದಿನಾಚರಣೆ ಇಂದು



ಪ್ರಬುದ್ಧ ಮನಸ್ಸು ಸಮಾಜ

ವಿವೇಕಾನಂದ ಎಚ್. ಕೆ.

**ಉದಯರಶ್ಮಿ ದಿನಪತ್ರಿಕೆ**

ಇಂಗ್ಲೆಂಡಿನ ಮ್ಯಾಂಚೆಸ್ಟರ್ ನ ಬಟ್ಟೆ ಗಿರಣಿಗಳು, ದಕ್ಷಿಣ ಆಫ್ರಿಕಾದ ಚಿನ್ನದ ಗಣಿಗಳು, ಚೀನಾದ ಕಬ್ಬಿಣದ ಅದಿರ ಗಣಿಗಳು, ಅರೇಬಿಯನ್ ಮರುಭೂಮಿಯ ಕೂಲಿಗಳು, ಬ್ರೆಜಿಲ್ ಕಾಫಿ ತೋಟದ ಕಾರ್ಮಿಕರು, ಸುಡಾನ್, ಇಥಿಯೋಪಿಯಾದ ಗುಲಾಮರು, ಇಟಲಿಯ ಕ್ವಾರಿಯ ಕಲ್ಲುಗಣಿ ಶ್ರಮಿಕರು, ಅಮೆರಿಕದ ಹಾಲಿವುಡ್‌ನ ಸಿನೆಮಾ ಕೆಲಸಗಾರರು, ಹಾಂಕಾಂಗ್ ನ ಹೋಟೆಲ್ ಕಾರ್ಮಿಕರು, ಆಸ್ಟ್ರೇಲಿಯಾ ದ್ವೀಪಗಳ ಮೀನುಗಾರರು, ಬಾಂಗ್ಲಾದೇಶದ ಬಿರು ಬಿಸಿಲಿನಲ್ಲಿ ನಡೆದಾಡುವ ಟಾಂಗಾವಾಲಾಗಳು, ಟಿಬೆಟ್ಟಿನ ದುರ್ಗಮ ರಸ್ತೆಗಳಲ್ಲಿ ವಾಹನ ಚಲಾಯಿಸುವ ಚಾಲಕರು, ಸಿರಿಯಾದ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ದಾದಿಯರು, ಉತ್ತರ ಕೊರಿಯಾದ ಸರ್ವಾಧಿಕಾರಕ್ಕೆ ನಲುಗಿ ಉಸಿರಾಡಲು ಕಷ್ಟ ಪಡುತ್ತಿರುವ ಸ್ವತಂತ್ರ ಜೀವಿಗಳು, ಭಾರತದ ಮ್ಯಾನ್ ಹೋಲ್ ಗಳಲ್ಲಿ ಕೆಲಸ ಮಾಡುವ ನನ್ನದೇ ಅಣ್ಣ ತಮ್ಮಂದಿರು, ಮುಂಬಯಿನ ರೈಲ್ವೆ ಕೂಲಿಗಳು, ಸೂರತ್ ನ ಬಟ್ಟೆ ಗಿರಣಿಗಳ ಕೆಲಸಗಾರರು, ವಿಶಾಖಪಟ್ಟಣದ ಮೀನುಗಾರರು, ಕೊಯಮತ್ತೂರಿನ ಪಟಾಕಿ ತಯಾರಕರು, ಮಂಗಳೂ-ರಿನ ಬೀಡಿ ಕಟ್ಟುವವರು, ಕೇರಳದ ಚಹಾ ತೋಟದ ದಿನಗೂಲಿಗಳು, ದೆಹಲಿಯ ಕಟ್ಟಡ ಕಾರ್ಮಿಕರು, ಜೈಪುರದ ಕಲ್ಲು ಬಂಡೆ ಹೊಡೆಯುವವರು, ಇಳಕಲ್ ನ ಸೀರೆ ನೇಯುವವರು, ಹೊಸಕೋಟೆಯ ಇಟ್ಟಿಗೆ ಕಾರ್ಮಿಕರು, ಲಕ್ನೋ ಬಸ್ ನಿಲ್ದಾಣದ ಕಸ ಗುಡಿಸುವವರು, ಅಸ್ಸಾಂನ ನಿರಾಶ್ರಿತರು, ಮಣಿಪುರದ ಕ್ಷೌರಿಕರು, ಭುವನೇಶ್ವರದ ಬಟ್ಟೆ ತೊಳೆಯುವವರು ಹೀಗೆ ಸಾಕಷ್ಟು ಶ್ರಮ ಜೀವಿಗಳು ನೆನಪಾಗುತ್ತಾರೆ..

ನೆನಪಿರಲಿ, ಜಗತ್ತಿನ ಪ್ರತಿ ಜೀವಿಯೂ ಕಾರ್ಮಿಕನೇ..

ಶ್ರೀಮಂತ ರಾಷ್ಟ್ರ ಕತಾರ್,

ಬಲಿಷ್ಠ ರಾಷ್ಟ್ರ ಅಮೆರಿಕ,

ಬಡ ರಾಷ್ಟ್ರ ಇಥಿಯೋಪಿಯ,

ಆಧ್ಯಾತ್ಮಿಕ ರಾಷ್ಟ್ರ ಭಾರತ,



ಧರ್ಮನಿಷ್ಠ ರಾಷ್ಟ್ರ ಇರಾನ್,

ಹಿಂಸಾತ್ಮಕ ರಾಷ್ಟ್ರ ಸಿರಿಯಾ,

ಶಾಂತಿಯುತ ರಾಷ್ಟ್ರ ನಾರ್ವೆ,

ಸುಂದರ ರಾಷ್ಟ್ರ ಸ್ವಿಟ್ಜರ್ಲ್ಯಾಂಡ್,

ಯಾವುದೇ ಆಗಿರಲಿ,

ಮಗುವಿನಿಂದ ವೃದ್ಧರವರೆಗೆ,

ಎಲ್ಲರೂ ಒಂದಲ್ಲಾ ಒಂದು ಕೆಲಸದಲ್ಲಿ ತೊಡಗಲೇಬೇಕು..


ವಿಶ್ವದ ಅತ್ಯಂತ ಶ್ರೀಮಂತ ವ್ಯಕ್ತಿ ತನಗೆ ಎಲ್ಲವೂ ದೊರೆತಾಗಲೂ ಸುಮ್ಮನೆ ಇರಲು ಸಾಧ್ಯವಿಲ್ಲ. ಏನಾದರೂ ಮಾಡಲೇಬೇಕು. ಇಲ್ಲದಿದ್ದರೆ ಆತ ನಿರ್ಜೀವಿಯಾಗುತ್ತಾನೆ. ಹಾಗೆಯೇ ಭಿಕ್ಷುಕ ಕೂಡ ತನ್ನ ಮಿತಿಯಲ್ಲಿ ಕೆಲಸ ಮಾಡಲೇಬೇಕು..

ಆದರೆ, ಕೆಲಸದ ರೂಪಗಳು, ಮಾರ್ಗಗಳು, ಗುರಿಗಳು, ಏರಿಳಿತಗಳು, ಅವಶ್ಯಕತೆಗಳು, ಅನಿವಾರ್ಯಗಳು ಬೇರೆ ಬೇರೆಯಾಗಿರುತ್ತದೆ ಅಷ್ಟೆ.

ಸಾಮಾನ್ಯವಾಗಿ ಮತ್ತು ಸರಳವಾಗಿ ಹೆಚ್ಚು ಶ್ರಮದಾಯಕ ಕೆಲಸ ಮಾಡುವ, ಕಡಿಮೆ ಹಣ ಗಳಿಸುವ, ಹೆಚ್ಚಿನ ಸುರಕ್ಷತೆ ಇಲ್ಲದ, ಸ್ವತಂತ್ರ ನಿರ್ಧಾರ ತೆಗೆದುಕೊಳ್ಳದ, ಮಾಲೀಕರ ಆಶಯಕ್ಕೆ ಅನುಗುಣವಾಗಿ ದುಡಿಯುವ,

ಬದುಕಿನ ಅನಿವಾರ್ಯತೆಗೆ ಶೋಷಣೆಗೆ ಒಳಗಾಗುವವರನ್ನು ಕಾರ್ಮಿಕರು ಎಂದು ಕರೆಯಲಾಗುತ್ತದೆ.

ಒಂದಷ್ಟು ಹಿಂದೆ ಕೆಲವು ಮನುಷ್ಯರನ್ನು ಗುಲಾಮರೆಂದು ಪರಿಗಣಿಸಿ ಪ್ರಾಣಿಗಳಂತೆ ಅವರವರ ದೈಹಿಕ ಸಾಮರ್ಥ-್ಯಕ್ಕೆ ತಕ್ಕಂತೆ ವ್ಯಾಪಾರವೂ ಮಾಡಲಾಗುತ್ತಿತ್ತು. ಅವರ ಯಾವ ಮೂಲಭೂತ ಅಂಶಗಳನ್ನು ಪರಿಗಣಿಸಲಾಗುತ್ತಿರಲಿಲ್ಲ.



ಆದರೆ, ಈಗಿನ ಆಧುನಿಕ ಜಗತ್ತಿನಲ್ಲಿ ಇದು ಇಲ್ಲವಾಗಿದೆ.

ಆದರೂ, ಕಾರ್ಮಿಕ ಶೋಷಣೆ ಬೇರೆ ಬೇರೆ ರೂಪದಲ್ಲಿ ಈಗಲೂ ಜೀವಂತವಿದೆ. ಈ ಬಗ್ಗೆ ಹಿಂದಿನಿಂದಲೂ ಒಂದಷ್ಟು ಪ್ರತಿಭಟನೆಗಳು ಆಗುತ್ತಿದ್ದರೂ ಸಮಗ್ರವಾಗಿ ಜಗತ್ತಿನ ಗಮನಸೆಳೆದ ಕೀರ್ತಿ ಕಾರ್ಲ್ ಮಾರ್ಕ್ಸ್ ಅವರಿಗೆ ಸಲ್ಲುತ್ತದೆ.

ಕಾರ್ಮಿಕರ ಶೋಷಣೆ ನಿಲ್ಲಬೇಕು ನಿಜ, ಆದರೆ ಅದಕ್ಕಾಗಿ ಶ್ರೀಮಂತ ಉದ್ಯಮಿಗಳನ್ನು ದ್ವೇಷಿಸಬಾರದು. ಸಂಘರ್ಷಕ್ಕಿಂತ ಸಮನ್ವಯತೆಗೆ ಹೆಚ್ಚಿನ ಮಹತ್ವ ಕೊಡಬೇಕು.

ಅದರಲ್ಲೂ ಬದಲಾದ ಈ ಆಧುನಿಕ ಕಾಲ ಘಟ್ಟದಲ್ಲಿ ಬಂಡವಾಳ ಶಾಹಿಗಳು ಕೂಡ ಮುಖ್ಯರಾಗುತ್ತಾರೆ. ಶೋಷಣೆ ತಪ್ಪಿಸುವ ಮಾರ್ಗಗಳು ಮುಖ್ಯವಾಗಬೇಕೆ ಹೊರತು



ಸೇಡಿನ ಕ್ರಮಗಳು ಮೇಲುಗೈ ಪಡೆಯಬಾರದು. ಅದು ನಕ್ಸಲಿಸಂ ಎಂಬ ಹಿಂಸಾತ್ಮಕ ಸಿದ್ದಾಂತಕ್ಕೆ ದಾರಿ ಮಾಡಿಕೊಡುತ್ತದೆ. ಅದು ತುಂಬಾ ಅಪಾಯಕಾರಿ.

ಈಗಲೂ ನಿಕೃಷ್ಟವಾಗಿ ಬದುಕುತ್ತಿರುವ ಕಾರ್ಮಿಕರು, ಅತ್ಯಂತ ಕಠಿಣ ಕೆಲಸಗಳಲ್ಲಿ ಜೀವದ ಹಂಗು ತೊರೆದು ದುಡಿಯುತ್ತಿರುವ ಕಾರ್ಮಿಕರು, ಲೈಂಗಿಕ ಶೋಷಣೆಗೆ ಒಳಗಾಗುತ್ತಿರುವ ಮಹಿಳಾ ಕಾರ್ಮಿಕರು,

ಹೋಟೆಲ್ ಮುಂತಾದ ಕಡೆ ಅಸಹನೀಯ ಕೆಲಸ ಮಾಡುತ್ತಿರುವ ಬಾಲ ಕಾರ್ಮಿಕರು ಮುಂತಾದವರ ಜೀವನಮಟ್ಟ ಸುಧಾರಿಸದೆ ದೇಶದ ಅಭಿವೃದ್ಧಿ ಸಾಧ್ಯವೇ ಇಲ್ಲ.

ಈ ಕಾರ್ಮಿಕ ದಿನದ ಸಂದರ್ಭದಲ್ಲಿ ನಮ್ಮ ವ್ಯವಸ್ಥೆಯಲ್ಲಿ, ಕಾರ್ಮಿಕರು, ಬಂಡವಾಳ ಶಾಹಿಗಳು, ವ್ಯಾಪಾರೋಧ್ಯಮಿಗಳ ಮಧ್ಯೆ ಒಂದು ಸಮಾನತೆಯ ಮಾನವೀಯತೆಯ ಸಮನ್ವಯ ಸಾಧ್ಯವಾಗಲಿ ಮತ್ತು ಒಬ್ಬರಿಗೊಬ್ಬರು ಪ್ರೀತಿಸುವ ಗೌರವಿಸುವ ವ್ಯವಸ್ಥೆ ನಿರ್ಮಾಣವಾಗಲಿ ಎಂದು ಆಶಿಸುತ್ತಾ..

### ಕೆರುಟಗಿ ಗ್ರಾಮದಲ್ಲಿ ನೀರಿಗಾಗಿ ಹಾಹಾಕಾರ । ಸಿಂದಗಿ–ಕಲಕೇರಿ ರಸ್ತೆ ಬಂದ್ ಮಾಡಿ ಧರಣಿ ಸತ್ಯಾಗ್ರಹ

# ಜೀವ ತಗೊಳ್ಳಿ ಇಲ್ಲವೇ ನೀರು ಕೊಡಿ! :ಗ್ರಾಮಸ್ಥರ ಆಕ್ರೋಶ

**ಉದಯರಶ್ಮಿ ನ್ಯೂಸ್**

ಕಲಕೇರಿ: ಸಮೀಪದ ಕೆರುಟಗಿ ಗ್ರಾಮದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸಲು ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ತಾಲೂಕು ಶಾಖೆ ಹಾಗೂ ವಲಯ ಶಾಖೆ ಕಲಕೇರಿ ಇವರ ಸಂಯುಕ್ತ ಆಶ್ರಯದಲ್ಲಿ ಕೆರುಟಗಿ ಗ್ರಾಮದಲ್ಲಿ ಸಿಂದಗಿ–ಕಲಕೇರಿ ಮುಖ್ಯರಸ್ತೆ ಬಂದ ಮಾಡಿ ಪ್ರತಿಭಟನೆ ಮಾಡಲಾಯಿತು.




ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಆಗಿದ್ದು, ಸ್ಥಳೀಯ ಆಡಳಿತ ಹಾಗೂ ತಾಲೂಕಾ ಆಡಳಿತ ಸಂಪೂರ್ಣವಾಗಿ ವಿಫಲವಾಗಿದೆ, ಕರ್ನಾಟಕ ಸರ್ಕಾರ ಬೇಸಿಗೆಯ ಕಾಲದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ಯೋಜನೆಗಳನ್ನು ರೂಪಿಸಿದ್ದು ಹಾಗೂ ವಿಶೇಷ ಅನುದಾನ ಮಂಜೂರಾತಿ ಇದ್ದರು ಸಹ ಯಾವುದೇ ಪ್ರಯೋಜನವಾಗಿಲ್ಲ. ಭಾರತಕ್ಕೆ ಸ್ವಾತಂ□□□□□□ ಸಿಕ್ಕು 75 ವರ್ಷಗಳು ಗತಿಸಿದರೂ ಸಾರ್ವಜನಿಕರಿಗೆ ಕುಡಿಯುವ ನೀರಿನ್ನು ಒದಗಿಸಲು ಆಗುತ್ತಿಲ್ಲ, ಇದು ಇಂದಿನ ಸರ್ಕಾರಕ್ಕೆ ಮತ್ತು ಗ್ರಾಮಾಡಳಿತಕ್ಕೆ ನಾಚಿಕೆಯಾಗುವ ಸಂಗತಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆಡಳಿತ ವ್ಯವಸ್ಥೆ ಖಂಡಿಸಿ ಖಾಲಿ ಕೊಡಗಳನ್ನು ಇಟ್ಟುಕೊಂಡು ಮಹಿಳೆಯರು ಹಾಗೂ ಗ್ರಾಮಸ್ಥರು ಸುಮಾರು ಮೂರು ಗಂಟೆಗಳ ಕಾಲ ಸಿಂದಗಿ – ಕಲಕೇರಿ ಮುಖ್ಯ ರಸ್ತೆಯನ್ನು ಬಂದ್ ಮಾಡಿ ಸುಡು ಬಿಸಿಲನ್ನು ಲೆಕ್ಕಿಸದೇ ರಸ್ತೆ ರೋಕೋ ಚಳುವಳಿ ಹಾಗೂ ಬೃಹತ್ ಪ್ರತಿಭಟನೆ ಹಮ್ಮಿಕೊಂಡು ಜೀವ ತಗೊಳ್ಳಿ, ಇಲ್ಲ ನೀರು ಕೊಡಿ ಎಂದು ಆಗ್ರಹಿಸಿದ ಗ್ರಾಮಸ್ಥರು ನಂತರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀಮತಿ ಎಂ ಟಿ ಅಂಗಡಿ ಅವರಿಗೆ ಮನವಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ದಲಿತ ಮುಖಂಡರು, ಮಾಜಿ ತಾಪಂ ಸದಸ್ಯ ಲಕ್ಕಪ್ಪ ಬಡಿಗೇರ, ಸರ್ಕಾರಿ ಜಿವೋಲಿಸ್ಟ ಬಸವರಾಜ ಚಿಕ್ಕಸಂಸಿ, ಪರಸುರಾಮ ಬಡಿಗೇರ, ಶಿವಾನಂದ ವಾಲೀಕಾರ, ಅಶೋಕ್ ಗುಡಿಸಲಮನಿ, ರಾಮನಗೌಡ ಚಟ್ಟರಕಿ, ಸಿದ್ರಾಮಪ್ಪ ಮಾದರ, ಪರಸುರಾಮ ದೊಡಮನಿ, ಬಾಬು ಮೇಲಿನಮನಿ, ಬಾಬು ರಾಠೋಡ, ಚಂದ್ರು ಬಡಿಗೇರ, ಮುತ್ತು ಅಂಬಳನೂರ, ಪ್ರಕಾಶ್ ಪಡಶೆಟ್ಟಿ ಸೇರಿದಂತೆ ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಮುಂತಾದವರು ಉಪಸ್ಥಿತರಿದ್ದರು.

# ಚುನಾವಣಾ ತರಬೇತಿ ಕೇಂದ್ರಗಳಿಗೆ ಡಿಸಿ ಟಿ.ಭೂಬಾಲನ್ ಭೇಟಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ದೇವರ ಹಿಪ್ಪರಗಿ, ಇಂಡಿ ಮತ್ತು ಸಿಂದಗಿಯಲ್ಲಿ ಪಿಆರ್‌ಒ ಎಪಿಆರ್‌ಒ ಮತ್ತು ಪಿಒ ಗಳಿಗಾಗಿ ಏರ್ಪಡಿಸಲಾಗಿದ್ದ ಚುನಾವಣಾ ತರಬೇತಿಯು ಕೇಂದ್ರಗಳಿಗೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಯಾಗಿರುವ ಟಿ. ಭೂಬಾಲನ್ ಅವರು ಮಂಗಳವಾರದಂದು ಭೇಟಿ ನೀಡಿ ಅಗತ್ಯವಾದ ಸಲಹೆ ಸೂಚನೆ ಮತ್ತು ಮಾರ್ಗದರ್ಶನ ನೀಡಿದರು.

### ಮೋರಟಗಿಯಲ್ಲಿ ಬಹಿರಂಗ ಪ್ರಚಾರ । ಮಾಜಿ ಶಾಸಕ ಭೂಸನೂರ ಕಿಡಿ

# ಗಂಡನ ಹಣ ಕಿತ್ತು ಹೆಂಡತಿಗೆ ನೀಡುವ ಕಾಂಗ್ರೆಸ್ ಗೆ ಬುದ್ಧಿ ಕಲಿಸಿ

**ಉದಯರಶ್ಮಿ ನ್ಯೂಸ್**



ಮೋರಟಗಿ: ಒಂದು ಕುಟುಂಬಕ್ಕೆ ಜಯಕಾರ ಹಾಕುವ ಕಾಂಗ್ರೆಸ್ ಪಕ್ಷಕ್ಕೆ ಮತದಾರರು ಬುದ್ಧಿ ಕಲಿಸಿ ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸಬೇಕು ಎಂದು ಮಾಜಿ ಶಾಸಕ ರಮೇಶ ಭೂಸನೂರ ಹೇಳಿದರು.

ಲೋಕಸಭೆ ಚುನಾವಣೆಯ ವಿಜಯಪುರ ಮೀಸಲು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರ ಪರ ಮಂಗಳವಾರ ಮತ ಯಾಚಿಸಿ ಅವರು ಮಾತನಾಡಿದರು.

ನಮ್ಮ ಪಕ್ಷ ಯಾವತ್ತೂ ಭಾರತ ಮಾತಾ ಕೀ ಜೈ ಎನ್ನುವ ಮೂಲಕ ದೇಶ ಪ್ರೇಮ ಮೆರೆಯುತ್ತದೆ. ಜನರಲ್ಲಿ ಸೌಹಾರ್ದ ಮೂಡಿಸುತ್ತದೆ. ಆದರೆ ಕಾಂಗ್ರೆಸ್ ನವರು ಕೇವಲ ಸೋನಿಯಾ ಗಾಂಧಿ ಕೀ ಜೈ, ರಾಹುಲ್ ಗಾಂಧಿ ಕೀ ಜೈ ಎನ್ನುವ ಮೂಲಕ ಒಂದು ಕುಟುಂಬವನ್ನು ಓಲೈಸುವ ಕಾರ್ಯ ಮಾಡುತ್ತಾರೆ. ಇಂಥವರಿಂದ ದೇಶದ ಅಭಿವೃದ್ಧಿ ಸಾಧ್ಯವೇ ಎಂದು ಪ್ರಶ್ನಿಸಿದರು.

ಬಡವರಿಗೆ ಪ್ರಧಾನಿ ನರೇಂದ್ರ ಮೋದಿ ಏನು ಮಾಡಿದ್ದಾರೆ ಎಂದು ಕೆಲವರು ಕೇಳುತ್ತಾರೆ. ಸಂಕಷ್ಟ ಸಮಯದಲ್ಲಿ ಎಲ್ಲರಿಗೂ ವ್ಯಾಕ್ಸಿನ್ ನೀಡುವ ಮೂಲಕ ಪ್ರಾಣ ಉಳಿಸಿದ ಪುಣ್ಯಾತ್ಮ ಮೋದಿ ಎಂಬುದನ್ನು ಯಾರೂ ಮರೆಯಬಾರದು.

ಅಡುಗೆ ಅನಿಲ, ಆರೋಗ್ಯಕ್ಕೆ ಅಭಯ, ಶೌಚಗೃಹ ನಿರ್ಮಾಣ–ಕ್ಕೆ ಸಹಾಯಧನ, ಆಯುಷ್ಮಾನ್ ಭಾರತ, ಜನೌಷಧಿ ಕೇಂದ್ರ, ಮನೆ ಮನೆಗೆ ನಲ್ಲಿ ಸಂಪರ್ಕ, ರೈತರಿಗೆ ಕಿಸಾನ್ ಸಮ್ಮಾನ, ಬಡವರಿಗೆ ಅಕ್ಕಿ ಹೀಗೆ ಅನೇಕ ಯೋಜನೆಗಳನ್ನು ಪ್ರಧಾನಿ ಮೋದಿ ಬಡವರಿಗಾಗಿ ಜಾರಿಗೊಳಿಸಿದ್ದಾರೆ. ನಮ್ಮ ಮಕ್ಕಳ ಉನ್ನತ ಶಿಕ್ಷಣಕ್ಕೆ ಮೋದಿ ಕ್ರಮ ಕೈಗೊಂಡಿದ್ದಾರೆ. ನಡೆದಾಡುವ ದೇವರೆಂದೇ ಖ್ಯಾತರಾದ ಸಿದ್ಧೇಶ್ವರ ಶ್ರೀಗಳು ಕೂಡ ಪ್ರಧಾನಿ ಮೋದಿ ಅವರನ್ನು ಕೊಂಡಾಡಿದ್ದಾರೆ. ಕೇವಲ ದೇಶವಲ್ಲ, ಇಂದು ಜಗತ್ತೇ ಅವರ ಮಾತು ಕೇಳುವಂತಾಗಿದೆ. ಗಂಡನಿಂದ ಹಣ ಕಿತ್ತುಕೊಂಡು ಹೆಂಡತಿಗೆ ಕೊಡುವ, ಬಹಿರಂಗವಾಗಿ ಪಾಕಿಸ್ತಾನ್ ಜಿಂದಾಬಾದ್ ಎಂದೂ ಘೋಷಣೆ ಕೂಗಿದರೂ ಕ್ರಮ ಕೈಗೊಳ್ಳದ ಕಾಂಗ್ರೆಸ್ ನಿಂದ ದೇಶ ಭದ್ರವಾಗಿರಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ನವರು ದೇಶವನ್ನೇ ಕೊಳ್ಳೆ ಹೊಡೆಯುತ್ತಾರೆ. ರೈತರಿಗೆ ರಾಜ್ಯ ಸರಕಾರ ನೀಡುತ್ತಿದ್ದ 4 ಸಾವಿರ ರೂ.ಸಹಾಯ ಧನವನ್ನು ಕಾಂಗ್ರೆಸ್ ಸರಕಾರ ಬಂದ್ ಮಾಡಿದೆ. ಸಂವಿಧಾನ ಬರೆದ ಡಾ.ಅಂಬೇಡ್ಕರ್ ಅವರಿಗೆ ಗೌರವ ನೀಡದ ಕಾಂಗ್ರೆಸ್ ಸರಕಾರ ದಲಿತರನ್ನೂ ಕಡೆಗಣಿಸಿದೆ. ಈ ಎಲ್ಲ ಸಂಗತಿಗಳನ್ನು ಪರಿಗಣಿಸಿ ನಾವೆಲ್ಲ ಏಕತೆಯಿಂದ ಬಿಜೆಪಿ ಬೆಂಬಲಿಸೋಣ ಎಂದರು.

ರೈತರ ಹೊಲಗಳು ಹಾಗೂ ಗ್ರಾಮೀಣ ಭಾಗಕ್ಕೆ ರಸ್ತೆಗಳನ್ನು, ಹೊಲಗಳಿಗೆ ಉಚಿತ ವಿದ್ಯುತ್, ರೈತರ ಮಕ್ಕಳಿಗೆ ಉನ್ನತ ಶಿಕ್ಷಣ ನೀಡುವ ಸಂಕಲ್ಪ ನಮ್ಮದಾಗಿದೆ. ಬಿಜೆಪಿ ಅಧಿಕಾರಕ್ಕೆ ಬಂದರೆ ಮಾತ್ರ ನೀವು ಅಭಿವೃದ್ಧಿ ಸದ್ದು ಕೇಳಲು ಸಾಧ್ಯ ಎಂದರು.

ಡಿ.ಕೆ.ಸುರೇಶ ಕೇವಲ 2 ಬಾರಿ ಸಂಸದರಾಗಿ ತಮ್ಮ ಆಸ್ತಿ 2465 ಕೋಟಿ ಎಂದು ಘೋಷಿಸಿಕೊಂಡಿದ್ದಾರೆ. ಆದರೆ ಮೋದಿಯವರು ಮೂರು ಬಾರಿ ಮುಖ್ಯಮಂತ್ರಿಯಾಗಿ, ಎರಡು ಬಾರಿ ಪ್ರಧಾನಿಯಾಗಿ ಕೇವಲ 2 ಕೋಟಿ ಆಸ್ತಿ ಹೊಂದಿದ್ದಾರೆ. ಇದರಿಂದಲೇ ನಮ್ಮ ಮೋದಿ ಅವರ ವ್ಯಕ್ತಿತ್ವ ಅರ್ಥವಾಗುತ್ತದೆ. ಪ್ರತಿಯೊಬ್ಬರೂ ದೇಶದ ಅಭಿವೃದ್ಧಿಗಾಗಿ ರಮೇಶ ಜಿಗಜಿಣಗಿ ಅವರನ್ನು ಬೆಂಬಲಿಸುವ ಮೂಲಕ ಮೋದಿ ಅವರ ಕೈಬಲಪಡಿಸಬೇಕು. ಬಲಿಷ್ಠ ಭಾರತ ನಿರ್ಮಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಮೋರಟಗಿ ವ್ಯಾಪ್ತಿಯ ಬಗಲೂರ, ಶಿರಸಗಿ, ಹಾವಳಗಿ, ಯರಗಲ್ ಗ್ರಾಮಗಳಲ್ಲಿ ಮತಯಾಚನೆ ಮಾಡಿದರು.

ಬಹಿರಂಗ ಸಭೆಯಲ್ಲಿ ಮಲ್ಲಿಕಾರ್ಜುನ ಜೋಗೂರ, ಗುರು ತಳವಾರ, ಸಿದ್ದು ಅನಗೊಂಡ, ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ, ಶ್ರೀಶೈಲಗೌಡ ಬಿರಾದಾರ, ಸಿದ್ದನಗೌಡ ಗುತ್ತರಗಿ ಸೇರಿದಂತೆ ಅನೇಕರು ಇದ್ದರು.




# ಕಲಕೇರಿಯಲ್ಲಿ ವಿವಿಧೆಡೆ ಮತದಾನ ಜಾಗೃತಿ

**ಉದಯರಶ್ಮಿ ನ್ಯೂಸ್**



ಕಲಕೇರಿ: ಲೋಕಸಭಾ ಚುನಾವಣೆ 2024ರ ಹಿನ್ನೆಲೆಯಲ್ಲಿ ಹೆಚ್ಚಿನ ಪ್ರಮಾಣದ ಮತದಾನವಾಗುವಂತೆ ಮಾಡಲು ಕಲಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಮತಗಟ್ಟೆಗಳಲ್ಲಿ ಮತದಾರರಿಗೆ ಜಾಗೃತಿ ಮೂಡಿಸಲಾಯಿತು.

ಕಲಕೇರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸನಗೌಡ ಚೌಧರಿ, ಗ್ರಾಪಂ ಅಧ್ಯಕ್ಷ ರಾಜ–ಅಹ್ಮದ ಸಿರಸಗಿ, ಶ್ರೀಶೈಲ ನಾಯ್ಕೋಡಿ, ಮುಖ್ಯಗುರುಗಳಾದ ಜೆ..ಬಿ.ಕುಲಕರ್ಣಿ, ಎಸ್.ಬಿ.ಪಟ್ಟಣಶೆಟ್ಟಿ, ಯಾಕುಬ ಸಿರಸಗಿ, ಬಿಎಲ್‌ಓ ಗಳಾದ ಡಿ.ಬಿ.ಅಡಕಿ, ಶರಣಮ್ಮ ಬಿರಾದಾರ, ಕೆ.ಎಮ್.ಕೇಸರಿ, ಎನ್.ಕೆ.ನಾಯ್ಕೋಡಿ, ಬಿ.ಎಮ್.ಚಿಗರಿ, ಗ್ರಾಪಂ ಸಿಬ್ಬಂದಿ ಶ್ರೀಶೈಲ ಮಾದರ, ಇರಗಂಟೆಪ್ಪ ಮೋಪಗಾರ, ರವಿ ಬಡಿಗೇರ, ಗ್ರಾಮಸ್ಥರಾದ ಈರಣ್ಣ ಗುಮಶೆಟ್ಟಿ, ಪಾಯಸಾಗರ ಜಗಶೆಟ್ಟಿ, ಜಗದೀಶ ವಡ್ಡೊಡಗಿ ಸೇರಿದಂತೆ ಇತರರು ಇದ್ದರು.

# ವಿಕಸಿತ ಭಾರತಕ್ಕಾಗಿ ಬಿಜೆಪಿ ಬೆಂಬಲಿಸಿ :ಶಿವರುದ್ರ ಬಾಗಲಕೋಟ

**ಉದಯರಶ್ಮಿ ನ್ಯೂಸ್**



ವಿಜಯಪುರ: ವಿಶ್ವನಾಯಕ, ಪ್ರಧಾನಿ ನರೇಂದ್ರ ಮೋದಿ ಅವರ ಕನಸಾಗಿರುವ ವಿಕಸಿತ ಭಾರತ ನಿರ್ಮಾಣಕ್ಕಾಗಿ ಜಿಲ್ಲೆಯ ಮತದಾರರು ಈ ಸಲವೂ ಬಿಜೆಪಿಯ ಕೈ ಹಿಡಿಯಬೇಕು ಎಂದು ವಿಜಯಪುರ ಮಹಾನಗರ ಪಾಲಿಕೆ ಸದಸ್ಯ ಶಿವರುದ್ರ ಬಾಗಲಕೋಟ ಮನವಿ ಮಾಡಿದರು.

ಲೋಕಸಭಾ ಚುನಾವಣೆ ಪ್ರಯುಕ್ತ ವಿಜಯಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿರುವ ಸಂಸದ ರಮೇಶ ಜಿಗಜಿಣಗಿ ಅವರ ಪರವಾಗಿ ಮಹಾನಗರ ಪಾಲಿಕೆಯ ವಾರ್ಡ್ ನಂಬರ್ 32 ರಲ್ಲಿ ಬರುವ ಗೋಂಧಳಿ ಗಲ್ಲಿ, ಉಪ್ಪಾರ ಗಲ್ಲಿ , ಅಡವಿಸ್ವಾಮಿ ಮಠ , ಶಾಪೇಟಿ ಗಲ್ಲಿ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಬಿಜೆಪಿ ಕಾರ್ಯಕರ್ತರೊಂದಿಗೆ ಮನೆ ಮನೆಗೆ ತೆರಳಿ ಮತಯಾಚನೆ ಮಾಡಲಾಯಿತು.

ಈ ವೇಳೆ ಪಾಲಿಕೆ ಸದಸ್ಯ ಶಿವರುದ್ರ ಬಾಗಲಕೋಟ ಮಾತನಾಡಿ, ನರೇಂದ್ರ ಮೋದಿ ಅವರ ಸಾಧನೆಗಳು ಮೂರನೇ ಅವಧಿಗೆ ಮತ್ತಷ್ಟು ವೇಗ ಪಡೆದುಕೊಳ್ಳಲಿದೆ. ಮೂರನೇ ಅವಧಿಯಲ್ಲಿ ದೇಶದ ಆರ್ಥಿಕತ ಶಕ್ತಿ ಹೆಚ್ಚಾಗಲಿದೆ. ಭ್ರಷ್ಟಾಚಾರ ರಹಿತ ಆಡಳಿತ, ನಿಸ್ವಾರ್ಥ ಸೇವೆ ನರೇಂದ್ರ ಮೋದಿಯವರ ಉದ್ದೇಶವಾಗಿದೆ. ಕಳೆದ 10 ವರ್ಷಗಳ ಆಡಳಿತದಲ್ಲಿ ಒಂದೇ ಒಂದು ಭ್ರಷ್ಟಾಚಾರ ನಡೆದಿಲ್ಲ ಎಂದರು.

ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ನಗರದಲ್ಲಿ ರಸ್ತೆಗಳು, ಕುಡಿಯುವ ನೀರು ಸೇರಿದಂತೆ ಎಲ್ಲಾ ಅವಶ್ಯಕ ಮೂಲಸೌಕರ್ಯ ಅಭಿವೃದ್ಧಿಗೊಳಿಸಿ ವಿಜಯಪುರ ನಗರದಲ್ಲಿ ಮಹತ್ತರ ಬದಲಾವಣೆ ತಂದಿದ್ದಾರೆ. ಸಂಸದ ರಮೇಶ ಜಿಗಜಿಣಗಿ ಅವರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣ, ರೈಲ್ವೆ ನಿಲ್ದಾಣಗಳ ಅಭಿವೃದ್ಧಿ, ಎನ್ಟಿಪಿಸಿ ಸೇರಿದಂತೆ ಅನೇಕ ಕೇಂದ್ರ ಪುರಸ್ಕೃತ ಯೋಜನೆಗಳನ್ನು ಯಶಸ್ವಿ ಅನುಷ್ಠಾನಗೊಳಿಸಿದ್ದಾರೆ. ಹೀಗಾಗಿ ವಿಜಯಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿರುವ ರಮೇಶ ಜಿಗಜಿಣಗಿ ಅವರನ್ನು ಮತ್ತೊಮ್ಮೆ ಬೆಂಬಲಿಸುವಂತೆ ಶಿವರುದ್ರ ಬಾಗಲಕೋಟ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಹಿಳಾ ಘಟಕದ ಮಲ್ಲಮ್ಮ ಜೋಗೂರ್ ಮುಖಂಡರಾದ ಅಮರ ಗರುಡಕರ, ಸಂದೀಪ್ ಕಾಳೆ, ಶ್ರೀನಿವಾಸ್ ಶಹಾಪುರ, ಆನಂದ ಸಲ್ಫೇಕರ, ಲಕ್ಷ್ಮಣ್ ಗಣೂರ, ಪ್ರವೀಣ ಹೇರಲಗಿ, ಹುಚ್ಚಪ್ಪ ಕವಿಶೆಟ್ಟಿ, ಸುರೇಶ್ ಗರುಡಕರ, ಸುವರ್ಣ ಕುರ್ಲೆ, ಗೀತಾ ಗಿಡವೀರ, ಪ್ರಕಾಶ ಹಿರಂಡಗಿ, ಗುರು ಶ್ಯಾಪೇಟಿ, ಸತೀಶ್ ಅಗಸರ, ಬಸವರಾಜ ಹಿರೇಮಠ, ವಿನಾಯಕ ಹೇರಲಗಿ, ಶಿವಾನಂದ ಗಿಡವೀರ, ಆದಿತ್ಯ ತಾವರಗೆರೆ, ಕಿರಣ್ ಸೊನ್ನದ , ಮಂಜುನಾಥ್ ಶ್ಯಾಪೇಟಿ, ವಿನೋದ್ ತೆಲಸಂಗ, ಹರೀಶ್ ಹಿರಂಡಗಿ, ಅರುಣ ಬೋವಿ, ಭೀಮು ಮಾಶಾಳ, ಗುರು ದೇಶಪಾಂಡೆ, ನಾನಾ ಕಾಸರ್, ಯಲ್ಲಪ್ಪ ಗೋರ್ಪಡೆ, ಅಮಿತ್ ಕುರ್ಲೆ, ಸುರೇಶ್ ಅಳಗುಂಡಗಿ, ಪಾಲಂಕಪ್ಪ ಕುರ್ಲೆ, ಶರಣು ಗಿಡುವೀರ ಮುಂತಾದವರು ಉಪಸ್ಥಿತರಿದ್ದರು.

**ಉದಯರಶ್ಮಿ ದಿನಪತ್ರಿಕೆ**

# ಗಮನಿಸಿ.. ನಾವು ಕಾರ್ಮಿಕರು

**ಇಂದು ವಿಶ್ವ ಕಾರ್ಮಿಕರ ದಿನ ಪ್ರಯುಕ್ತ ವಿಶೇಷ ಲೇಖನ**

**ವೀಣಾಂತರಂಗ**




**–ವೀಣಾ ಎಚ್. ಪಾಟೀಲ್, ಮುಂಡರಗಿ**

ಕಾರ್ಮಿಕರು ಎಂದರೆ ಯಾರು?.. ತಮ್ಮ ದೈನಂದಿನ ಹೊಟ್ಟೆಪಾಡಿನ ಜೀವನಕ್ಕಾಗಿ ದುಡಿಯುವ ಸರ್ಕಾರಿ, ಅರೆಸರಕಾರಿ, ಸಂಘ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಜನಸಮೂಹ.

ಅಸಂಘಟಿತವಾಗಿ ಈ ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾಗ ಇವ–ರಿಗೆ ಯಾವುದೇ ಕೆಲಸದ ಭದ್ರತೆ ಇರುತ್ತಿರಲಿಲ್ಲ. ದಿನಕ್ಕೆ 16 ಗಂಟೆಗಳ ಕಾಲ ಕಾರ್ಯನಿರ್ವಹಿಸಬೇಕಾದ ಅನಿವಾರ್ಯತೆ ಇತ್ತು. ರಜಾ ಸೌಲಭ್ಯ, ನಿಯಮಿತ ಸಂಬಳ, ಆರೋಗ್ಯ ವಿಮೆ, ಹೆಣ್ಣು ಮಕ್ಕಳಿಗೆ ಹೆರಿಗೆ ರಜೆ ಹೀಗೆ ಯಾವುದೇ ಸೌಲಭ್ಯಗಳು ಇರುತ್ತಿರಲಿಲ್ಲ. ದುಡಿಯುವ ವರ್ಗಕ್ಕೆ ಮೂಲಭೂತ ಅವಶ್ಯಕತೆಗಳನ್ನು ಕೂಡ ಪೂರೈಸಿಕೊಳ್ಳಲು ಸಾಧ್ಯವಾಗದ ಪರಿಸ್ಥಿತಿ. ಬಂಡವಾಳ ಶಾಹಿಗಳ ಹಿಡಿತದಲ್ಲಿ ಕೂಲಿ ಕಾರ್ಮಿಕರು, ದಿನಗೂಲಿಗಳು ಕಾರ್ಯನಿರ್ವಹಿಸುವಂತಹ ಪರಿಸ್ಥಿತಿಯಲ್ಲಿ ಶ್ರೀಮಂತ ಉದ್ಯಮಿಗಳು ಅವರನ್ನು ಹಿಂಡಿ ಹಿಪ್ಪೆ ಮಾಡುತ್ತಿದ್ದರು. ಅತ್ಯಂತ ಕಡಿಮೆ ಸಂಬಳ ನೀಡಿ ದಿನದ ಮೂರನೇ ಎರಡು ಭಾಗ ಸಮಯ ಅಂದರೆ ಸುಮಾರು 16 ಗಂಟೆಗಳ ಕಾಲ ಕೆಲಸ ನಿರ್ವಹಿಸಬೇಕಾದಂತಹ ಪರಿಸ್ಥಿತಿ ಕಾರ್ಮಿಕರದು. ಆರೋಗ್ಯ ದೃಷ್ಟಿಯಿಂದ ಇದು ಹಾನಿಕಾರಕವಾಗಿದ್ದು ಕಾರ್ಮಿಕರು ದೈಹಿಕ, ಮಾನಸಿಕ ಮತ್ತು ಆರ್ಥಿಕ ಅನಾನುಕೂಲಕ್ಕೆ ಒಳಗಾದರು.

17 ,18ನೇ ಶತಮಾನದ ಹೊತ್ತಿಗೆ ಫ್ರಾನ್ಸ್ ನ ಬಹುದೊಡ್ಡ ಸಮಾಜವಾದಿಗಳಾದ ಕಾರ್ಲ್ ಮಾರ್ಕ್ಸ್ ಮತ್ತು ಮಾರ್ಟಿನ್ ಲೂಥರ್ ಕಿಂಗ್ ರವರು ಅಭಿವೃದ್ಧಿಪರ ಸಮಾಜದ ಕಲ್ಪನೆ ಹುಟ್ಟು ಹಾಕಿದರು. ದುಡಿಮೆಗೆ ತಕ್ಕ ಸಂಬಳ, ಆರೋಗ್ಯ, ಶಿಕ್ಷಣ, ವಸತಿ



ವ್ಯವಸ್ಥೆಗಳು ಮತ್ತು ಭವಿಷ್ಯನಿಧಿ ಸ್ಥಾಪನೆಗಳ ಕುರಿತು ಯೋಜನೆಗಳನ್ನು ರೂಪಿಸಿದರು. ಸಮುದಾಯದ ಒಟ್ಟು ಅಭಿವೃದ್ಧಿಯ ಕುರಿತ ಚಿಂತನೆಯನ್ನು 'ಕಮ್ಯುನಿಸಂ' ಎಂದು ಹೆಸರಿಸಿ, ಆಡಳಿತದ ಆರ್ಥಿಕ ಮತ್ತು ರಾಜಕೀಯ ಹಿತಾಸಕ್ತಿಯು



ಸಮುದಾಯದ ಕೈಯಲ್ಲಿ ಇರಬೇಕು ಎಂದು ಪ್ರತಿಪಾದಿಸಿದರು.

ಕಾರ್ಮಿಕರ ಕಲ್ಯಾಣಕ್ಕಾಗಿ ಅನೇಕ ರೀತಿಯ ಹೋರಾಟಗಳ ಮೂಲಕ ಧ್ವನಿ ಎತ್ತಿದ ಪರಿಣಾಮವಾಗಿ ಕಾರ್ಮಿಕರಿಗೂ ಒಂದು ದಿನ ಬೇಕೆಂದು ಈ ವಿಶೇಷ ದಿನ ಹುಟ್ಟಿಕೊಂಡಿತು.

1921ರಲ್ಲಿ ಅಮೆರಿಕ ಸಂಯುಕ್ತ ಸಂಸ್ಥಾನದ ಕಾರ್ಮಿಕ ಸಂಘಟನೆಯ ಅಧ್ಯಕ್ಷರಾಗಿದ್ದ ಪೀಟರ್. ಜೆ.ಜ್ಯೂರಿಯವರು ಬಡಗಿತನದ ಸಹೋದರತ್ವ ದಿನವನ್ನು ಸಂಭ್ರಮದಿಂದ ಆಚರಿಸಿದ್ದರು. ಮೊದಲು ಪ್ಯಾರಿಸ್ ದೇಶದಲ್ಲಿ ಮೇ 1ರಂದು ಕಾರ್ಮಿಕ ದಿನಾಚರಣೆ ಎಂದು 1927ರಲ್ಲಿ ಆಚರಿಸಲಾಯಿತು.

ಸಮಾಜವಾದಿ ಸಂಘಟನೆಗಳು, ಕಾರ್ಮಿಕ ಸಂಘಗಳು, ಬುದ್ಧಿಜೀವಿಗಳು ಸೇರಿ ಇದನ್ನು ಸ್ಥಾಪಿಸಿದರು.

2ನೇ ಮಹಾಯುದ್ಧದ ನಂತರ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಹಲವಾರು ತೀರ್ಮಾನಗಳನ್ನು







ಕೈಗೊಳ್ಳಲಾಯಿತು.

ಕಾರ್ಮಿಕರ ಕಲ್ಯಾಣ, ಕೆಲಸಕ್ಕೆ ತಕ್ಕ ಕೂಲಿ, ಸಂಭಾವನೆ, ರೋಗರುಜಿನಗಳ ಸಮಯದಲ್ಲಿ ಧನಸಹಾಯ, ಕೆಲಸ ಮಾಡುವಲ್ಲಿ ಉತ್ತಮ ಪರಿಸರ ನಿರ್ಮಾಣ, ಆರೋಗ್ಯ, ಶಿಕ್ಷಣ, ಮಕ್ಕಳಿಗೆ ವಿದ್ಯಾರ್ಥಿ ವೇತನಗಳು, ಮಹಿಳಾ ಕಾರ್ಮಿಕರಿಗೆ ವಿಶೇಷ ಪ್ಯಾಕೇಜ್ ಗಳು, ವಿಮಾ ಯೋಜನೆ, ಕಾನೂನು ಸಲಹೆ ಮತ್ತು ಹೋರಾಟ, ಕೈಗಾರಿಕೆ, ಕನಿಷ್ಠ ಕೂಲಿ ನಿಗದಿ, ಈ ಮುಂತಾದ ವಿಷಯಗಳನ್ನು ಚರ್ಚೆ ಮಾಡಿ ಎಲ್ಲರಿಗೂ ಅನ್ವಯವಾಗುವಂತೆ ಜಾರಿಗೊಳಿಸುವ ಮಹಾ ಹೊಣೆಗಾರಿಕೆ ಈ ಕಾರ್ಮಿಕ ಸಂಘಟನೆಗಳ ಹೆಗಲೇರಿತು.

ಪ್ರತಿ ಗ್ರಾಮ ಪಟ್ಟಣ ನಗರ ಜಿಲ್ಲೆ ಮತ್ತು ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟಗಳಲ್ಲಿ ಕಾರ್ಮಿಕ ಸಂಘಟನೆಗಳು ಕಾರ್ಯನಿರ್ವಹಿಸುತ್ತಿದ್ದು ಇವುಗಳ ಮುಖ್ಯ ಕೆಲಸ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವುದು. ಮೇ 1ರಂದು ಸಭೆ,ಚರ್ಚೆ, ನಿರ್ಣಯ, ಮೆರವಣಿಗೆ, ಪ್ರದರ್ಶನ, ಉತ್ತಮ ಕಾರ್ಯ ನಿರ್ವಹಣೆಗೆ ಪ್ರೋತ್ಸಾಹ, ಪರಿಹಾರ ವಿತರಣೆ ಮುಂತಾದ ಕಾರ್ಯಕ್ರಮ ಇಟ್ಟುಕೊಳ್ಳುತ್ತಾರೆ.

ಇದರಲ್ಲಿ ಆಲೋಚನೆ ಮಾಡುವ ಅಂಶವೆಂದರೆ ಸಂಘಟಿತ, ಅಸಂಘಟಿತ ವಲಯದಲ್ಲಿ ದುಡಿಯುವ ಕಾರ್ಮಿಕರೂ ಇದ್ದಾರೆ. ಫ್ಯಾಕ್ಟರಿ, ಬೀಡಿ, ಸಾಬೂನು, ಎಣ್ಣೆ, ಬಟ್ಟೆ ಗಿರಣಿಗಳು ಊದುಬತ್ತಿ ತಯಾರಿಕೆ, ಹತ್ತಿ ಗಿರಣಿಗಳು ಮತ್ತು ಅಕ್ಕಿ ಮಿಲ್ಲುಗಳು, ಗೃಹನಿರ್ಮಾಣ, ತೋಟಗಾರಿಕೆ ಹೀಗೆ ಹತ್ತು ಹಲವು ಸೇರುತ್ತದೆ. ಆಯಾಯ ವಿಭಾಗದಲ್ಲಿ



ಸಂಬಂಧ ಪಟ್ಟವರು ಅವರ ಸದಸ್ಯತ್ವ ಮಾಡಿ, ಅವರಿಗಿರುವ ಸೌಲಭ್ಯಗಳನ್ನು ಹೇಳಿ ಕೊಡಿಸುತ್ತಾರೆ.

ಲಕ್ಷಾಂತರ ಮಹಿಳಾ ಶ್ರಮಿಕವರ್ಗ ಶಾಲಾ ಬಿಸಿಯೂಟದ ಕೆಲಸದಲ್ಲಿ ಇರುವುದನ್ನು ಕಾಣಬಹುದು. ದಾದಿಯರು, ಅಂಗನವಾಡಿ ಕಾರ್ಯಕರ್ತರು, ಖಾಸಗಿ ಶಾಲೆಯ ಶಿಕ್ಷಕರು ಗಾರ್ಮೆಂಟ್ ಗಳಲ್ಲಿ ಕೆಲಸ ಮಾಡುವ ಮಹಿಳಾ ಕೆಲಸಗಾರ್ತಿಯರು, ಸಾಫ್ಟ್ ವೇರ್ ಮತ್ತು ಹಾರ್ಡ್ವೇರ್ ಉದ್ಯಮಗಳಲ್ಲಿ ಕಾರ್ಯನಿರ್ವಹಿಸುವ ಹೆಣ್ಣು ಮಕ್ಕಳು ಹೀಗೆ ಮಹಿಳಾ ಕಾರ್ಮಿಕರಾಗಿ ಕೋಟ್ಯಾಂತರ ಜನರು ದೇಶದ ಪ್ರಗತಿಗೆ ಅಹರ್ನಿಶಿ ಸೇವೆ ಸಲ್ಲಿಸುತ್ತಿದ್ದಾರೆ. ಮುಖ್ಯವಾಗಿ ಮಹಿಳೆಯರಿಗೆ ಶೌಚಾಲಯ ವ್ಯವಸ್ಥೆ, ಅನಾರೋಗ್ಯದ ಸಂದರ್ಭದಲ್ಲಿ ವಿಶ್ರಾಂತಿ ಕೊಠಡಿಗಳ ವ್ಯವಸ್ಥೆ ಮಹಿಳಾ ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಸ್ಥಳದಲ್ಲಿ ಅವಶ್ಯಕತೆವಾಗಿದೆ.. ಈ ನಿಟ್ಟಿನಲ್ಲಿ ಇನ್ನೂ ಕಾರ್ಯಗಳು ನಡೆಯಬೇಕು.

ಪ್ರತಿಯೊಬ್ಬರ ಜೀವವೂ ಅಮೂಲ್ಯವಾದುದು. ಕೆಲಸ ಮಾಡುವ ಸ್ಥಳ, ಮೂಲಭೂತ ಅನುಕೂಲಗಳು, ಜೀವನ ಭದ್ರತೆ ಎಲ್ಲವೂ ಇಂದಿನ ದಿನಗಳಲ್ಲಿದೆ. ವ್ಯಾಪಕ ಪ್ರಚಾರ ಮಾಡಿ, ಮಾಹಿತಿ ನೀಡಿ ಅವರಿಗೆ ಅದನ್ನು ಒದಗಿಸಿಕೊಡುವ ಕಾರ್ಯದಲ್ಲಿ ಬಹಳಷ್ಟು ಕಾರ್ಮಿಕ ಪರ ಸಂಘಟನೆಗಳು ತೊಡಗಿಸಿಕೊಂಡಿವೆ.

12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರು ಕಾಯಕವೇ ಕೈಲಾಸ ಎಂದು ಶ್ರಮದ ಜೀವನಕ್ಕೆ ಭಕ್ತಿಯ ಮಾರ್ಗವನ್ನು ತೋರಿಸಿಕೊಟ್ಟರು. ಕಾರ್ಮಿಕರು ದೇಶವನ್ನು ಕಟ್ಟುವ ನಿಜವಾದ ಕಟ್ಟಾಳುಗಳು. ಅವರ ಬೆಂಬಲಕ್ಕೆ ಸಮಾಜದ ಸರ್ವ ಜನರು ಕೈಗೂಡಿಸಲಿ ಎಂದು ಹಾರೈಸುವ..

# ವಿಜಯಪುರದಲ್ಲಿ ಬಿಜೆಪಿ ಕಾರ್ಯಕರ್ತರಿಂದ ಮನೆಮನೆ ಪ್ರಚಾರ



**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭಾ ಚುನಾವಣೆ ಹಿನ್ನೆಲೆ ಬಿಜೆಪಿ ಮಹಾಸಂಪರ್ಕ ಅಭಿಯಾನ ಅಂಗವಾಗಿ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯ 33 ನೇ ವಾರ್ಡ್ ಗಳಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿ ಮನೆಮನೆಗೆ ತೆರಳಿ ಬಿಜೆಪಿ ಅಭ್ಯರ್ಥಿಯಾಗಿರುವ ಸಂಸದ ರಮೇಶ ಜಿಗಜಿಣಗಿ ಅವರ ಪರ ಭರ್ಜರಿ ಪ್ರಚಾರ ನಡೆಸಿದರು.

ವಿಜಯಪುರ ನಗರದ ವಾರ್ಡ್ ನಂ. 33 ನೇ ವಾರ್ಡಿನ ಶಾಸ್ತ್ರಿ ನಗರದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿ ಮನೆ ಮನೆಗೆ ತೆರಳಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದಲ್ಲಿ ಕಳೆದ ಹತ್ತು ವರ್ಷಗಳ ಸಾಧನೆಗಳು, ಜನಪರ ಯೋಜನೆಗಳು, ದೇಶದಲ್ಲಾದ ಸಕಾರಾತ್ಮಕ ಬದಲಾವಣೆಗಳ ಜೊತೆಗೆ ವಿಜಯಪುರ ಬಿಜೆಪಿ ಸಂಸದ ರಮೇಶ ಜಿಗಜಿಣಗಿ ಅವರ ಮತಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳ ಕುರಿತು ಮನವರಿಕೆ ಮಾಡಿಕೊಟ್ಟು, ವಿಕಸಿತ ಭಾರತದ ಸಂಕಲ್ಪದೊಂದಿಗೆ ದೇಶವಾಸಿಗಳ ರಕ್ಷಣೆಗೆ ಪಣ–ತೊಟ್ಟಿರುವ ಪ್ರಧಾನಿ ಮೋದಿಯವರ ನೇತೃತ್ವದ ಬಿಜೆಪಿ ಪಕ್ಷಕ್ಕೆ ಬೆಂಬಲಿಸಿ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರಿಗೆ ಮತ್ತೊಮ್ಮೆ ಆಶೀರ್ವದಿಸುವಂತೆ ಮತದಾರರಲ್ಲಿ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಬಿಜೆಪಿ ಯುವ ಧುರೀಣರಾದ ಸಂದೀಪ ಪಾಟೀಲ, ಕುಮಾರ ಪೂಜಾರಿ, ಗುರು ಹೂಗಾರ, ಸಂಜಯ ಅರ್ಜುಣಗಿ

ವಿಠ್ಠಲ ನಡುವಿನಕೇರಿ, ಸುಧೀನಂಧ್ರ ಕುಲಕರ್ಣಿ, ಅರುಣ ಕೆಂಭಾವಿ, ಜಟ್ಟೆಪ್ಪ ಹುಲ್ಲೂರ, ಸತೀಶ ಹೂಗಾರ, ಸಾಗರ ಮಸ್ಕೆ, ವೀರೇಶ ನಾಗುರ, ಪ್ರತೀಕ ಮುಪ್ಪಯಿನಮಠ

ಹರೀಶ ಸೂತ್ರವೇ, ರಾಜು ಸೂರ್ಯವಂಶಿ, ದೇವಪ್ರಸನ್ನ ತಿಕೋಟಾ, ಅಭಿಷೇಕ್ ಹಿರೇಮಠ, ಸೇರಿದಂತೆ ವಾರ್ಡಿನ ಪ್ರಮುಖರು ಹಾಗೂ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

# ಬಿಜೆಪಿ ಕಾರ್ಯಕರ್ತರಿಂದ ಬಿರುಸಿನ ಪ್ರಚಾರ :ಜಿಗಜಿಣಗಿ ಪರ ಮತ ಯಾಚನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭಾ ಚುನಾವಣೆ ಹಿನ್ನೆಲೆ ಬಿಜೆಪಿ ಮಹಾಸಂಪರ್ಕ ಅಭಿಯಾನ ಅಂಗವಾಗಿ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯ 31 ಮತ್ತು 33 ನೇ ವಾರ್ಡ್ ಗಳಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿ ಮನೆಮನೆಗೆ ತೆರಳಿ ಬಿಜೆಪಿ ಅಭ್ಯರ್ಥಿಯಾಗಿರುವ ಸಂಸದ ರಮೇಶ ಜಿಗಜಿಣಗಿ ಅವರ ಪರ ಭರ್ಜರಿ ಪ್ರಚಾರ ನಡೆಸಿದರು.

ವಿಜಯಪುರ ನಗರದ ವಾರ್ಡ್ ನಂ. 31 ರಲ್ಲಿರುವ ರಾಘವೇಂದ್ರ ಚಾಳ, ಅಜರೇಕರ ಚಾಳ ಬಡಾವಣೆಗಳಲ್ಲಿ ಮತ್ತು 33 ನೇ ವಾರ್ಡಿನ ಶಾಸ್ತ್ರಿ ನಗರದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿ ಮನೆ ಮನೆಗೆ ತೆರಳಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದಲ್ಲಿ ಕಳೆದ ಹತ್ತು ವರ್ಷಗಳ ಸಾಧನೆಗಳು, ಜನಪರ ಯೋಜನೆಗಳು, ದೇಶದಲ್ಲಾದ ಸಕಾರಾತ್ಮಕ ಬದಲಾವಣೆಗಳ ಜೊತೆಗೆ ವಿಜಯಪುರ ಬಿಜೆಪಿ ಸಂಸದ ರಮೇಶ ಜಿಗಜಿಣಗಿ ಅವರ ಮತಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳ ಕುರಿತು ಮನವರಿಕೆ ಮಾಡಿಕೊಟ್ಟು, ವಿಕಸಿತ ಭಾರತದ ಸಂಕಲ್ಪದೊಂದಿಗೆ ದೇಶವಾಸಿಗಳ ರಕ್ಷಣೆಗೆ ಪಣ–



ತೊಟ್ಟಿರುವ ಪ್ರಧಾನಿ ಮೋದಿಯವರ ನೇತೃತ್ವದ ಬಿಜೆಪಿ ಪಕ್ಷಕ್ಕೆ ಬೆಂಬಲಿಸಿ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರಿಗೆ ಮತ್ತೊಮ್ಮೆ ಆಶೀರ್ವದಿಸುವಂತೆ ಮತದಾರರಲ್ಲಿ ಮನವಿ ಮಾಡಿಕೊಂಡರು. ಪ್ರತಿ ಮನೆಗಳಲ್ಲಿ ಸಿಕ್ಕ ಅದ್ಬುತ ಸ್ಪಂದನೆ ಹಾಗೂ ಬೆಂಬಲದಾಯಕ ಮಾತುಗಳು ಕಾರ್ಯಕರ್ತರ ಚುನಾವಣಾ ಪ್ರಚಾರದ ಹುಮ್ಮಸ್ಸನ್ನು ಇಮ್ಮಡಿಗೊಳಿಸಿದ್ದವು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಕಾರ್ಯದರ್ಶಿಗಳಾದ ಕೃಷ್ಣಾ ಗುನ್ನಾಳಕರ್, ರಾಜೇಶ ತವಸೆ, ಮಾಧ್ಯಮ ಸಂಚಾಲಕ ವಿಜಯ್ ಜೋಶಿ, ಬಿಜೆಪಿ ಎಸ್ ಸಿ ಮೋರ್ಚಾ ಉಪಾಧ್ಯಕ್ಷ ವಿಠ್ಠಲ ನಡುವಿನಕೇರಿ ಬಿಜೆಪಿ ಮುಖಂಡರಾದ, ರೋಹನ್ ಆಪ್ಟೆ, ಆದಿತ್ಯ ತಾವರಗೇರಿ, ಆನಂದ ಮುಚ್ಚಂಡಿ, ಅನಿಲ್ ಉಪ್ಪಾರ, ನಿಖಿಲ್ ಮ್ಯಾಗೇರಿ, ಕೃಷ್ಣ ಮ್ಯಾಗೇರಿ, ಜಗದೀಶ್ ಮುಚ್ಚಂಡಿ, ಅಭಯ ಹದನೂರ, ಕಿರಣ ಸೌದಿ, ವಿಕಾಸ್ ಕಿಟ್ಟ, ಶಿವರಾಜ್ ಮಡಿವಾಳ, ಪ್ರತೀಕ ಮುಪ್ಪೈನಮಠ, ದಯಾನಂದ ಅಪ್ಜಲಪುರ, ಸತೀಶ ಮಂಟೂರ, ರೋಹನ್ ದಾಶಾಳ, ಪ್ರಮೋದ್ ಐನಾಪುರ, ವಿನಾಯಕ್ ದಹಿಂದೆ, ಗಣೇಶ ಶಿಂದೆ, ವಿನೋದ ಪತ್ತಾರ ಸೇರಿದಂತೆ ವಾರ್ಡಿನ ಪ್ರಮುಖರು ಹಾಗೂ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

# ಬಂಜಾರ ಸಮಾಜಕ್ಕೆ ಕಾಂಗ್ರೆಸ್ ನಿಂದ ಅನ್ಯಾಯ :ರಾಠೋಡ

**ಉದಯರಶ್ಮಿ ನ್ಯೂಸ್**

ಸಿಂದಗಿ: ಕಾಂಗ್ರೆಸ್ ಪಕ್ಷದಲ್ಲಿ ಬಂಜಾರ ಸಮಾಜದ ನಾಯಕರಲ್ಲಿ ಒಬ್ಬರು ಎಂಎಲ್ಎ, ಎಂಎಲ್‌ಸಿ ಇದ್ದರೂ ಮಂತ್ರಿಸ್ಥಾನ ನೀಡದೇ ಕಾಂಗ್ರೆಸ್ ಬಂಜಾರ ಸಮಾಜಕ್ಕೆ ಅನ್ಯಾಯ ಮಾಡಿದೆ ಎಂದು ಬಿಜೆಪಿ ಪ್ರಕೋಷ್ಠ ಜಿಲ್ಲಾ ಸಹ ಸಂಚಾಲಕ ಭೀಮಸಿಂಗ್ ರಾಠೋಡ ಆಕ್ರೋಶ



ವ್ಯಕ್ತಪಡಿಸಿದರು.

ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಮಂಗಳವಾರ ಹಮ್ಮಿಕೊಂಡ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಂಜಾರ್ ಸಮಾಜದ ಅಭಿವೃದ್ಧಿ ನಿಗಮ ಮಂಡಳಿ ಮಾಡಿದ ಕೀರ್ತಿ ಬಿಜೆಪಿ ಪಕ್ಷಕ್ಕೆ ಸಲ್ಲುತ್ತದೆ. ವಂಚಿತ ತಾಂಡಾಗಳಿಗೆ ಕಂದಾಯ ಗ್ರಾಮ ಎಂದು ಕಾಂಗ್ರೆಸ್ ಸರಕಾರ ಮಾಡಲಿಲ್ಲ. ಆದರೆ ಬಿಜೆಪಿ ಸರಕಾರ ಅಧಿಕಾರಕ್ಕೆ ಬಂದ ಮೇಲೆ ತಾಂಡಾಗಳನ್ನು ಕಂದಾಯ ಗ್ರಾಮ ಎಂದು ಘೋಷಣೆ ಮಾಡಿತು. ಕಾಂಗ್ರೆಸ್ ಪಕ್ಷ 5 ಮೀಸಲು ಕ್ಷೇತ್ರಗಳಲ್ಲಿ ಒಂದು ಸಹ ಬಂಜಾರ್ ಸಮಾಜಕ್ಕೆ ಟಿಕೆಟ್ ನೀಡದಿರುವುದು ಶೋಚನೀಯ. ಸದಾಶಿವ ಆಯೋಗದಲ್ಲಿ ನಮ್ಮ ಸಮಾಜಕ್ಕೆ ನೀಡಬೇಕಾದ ಮೀಸಲಾತಿಯನ್ನು ನೀಡಿದೆ.

ನಮ್ಮ ಬಂಜಾರ್ ಸಮಾಜದ ಮಣಿಕಂಠ ರಾಠೋಡ ಅವರಿಗೆ ಪ್ರಿಯಾಂಕ ಖರ್ಗೆ, ಮಲ್ಲಿಕಾರ್ಜುನ ಖರ್ಗೆ ಮನೆತನದವರು 100ಕ್ಕೂ ಅಧಿಕ ಕೇಸ್‌ಗಳನ್ನು ದಾಖಲಿಸುವ ಮೂಲಕ ಹಿಂಸೆ ಮಾಡಿರುವುದನ್ನು ಸಮಾಜ ಮರೆಯದೇ ಕಲಬುರಗಿಯಲ್ಲಿಯೂ ಎಚ್ಚೆತ್ತುಕೊಂಡು ಬಿಜೆಪಿ ಪಕ್ಷದ ನಮ್ಮ ಸಮಾಜದ ಅಭ್ಯರ್ಥಿ ಜಾದವ್ ಅವರನ್ನು ಬೆಂಬಲಿಸಿ ಅವರಿಗೆ ಮತ ಚಲಾಯಿಸಿ ಗೆಲ್ಲಿಸಿ ತರಬೇಕು ಎಂದು ಮನವಿ ಮಾಡಿಕೊಂಡರು.

ಬಿಜೆಪಿ ಪಕ್ಷ ಅಧಿಕಾರದಲ್ಲಿದ್ದಾಗ ಸೇವಾಲಾಲ್ ಅವರ ಜನ್ಮಸ್ಥಳವಾದ ಸುರಕೊಂಡನಕೊಪ್ಪ ಜೀರ್ಣೋದ್ದಾರಕ್ಕೆ ಸುಮಾರು 80ಕೋಟಿ ಅನುದಾನ ನೀಡಿ ಸಮುದಾಯ ಭವನ, ಸುಂದರ ಉದ್ಯಾನವನ ಸೇ–ರಿದಂತೆ ಅನೇಕ ಕಾರ್ಯಗಳನ್ನು ಮಾಡಿದ ಕೀರ್ತಿ ಬಿಜೆಪಿಗೆ ಸಲ್ಲುತ್ತದೆ. ಸುಖಾ ಸುಮ್ಮನೇ ಕಾಂಗ್ರೆಸ್ ಪಕ್ಷ ನಮ್ಮ ಸಮಾಜದ ಬಗ್ಗೆ ತಪ್ಪು ಸಂದೇಶವನ್ನು ರವಾನಿಸುತ್ತಿರುವುದು ಸರಿಯಲ್ಲ. ಜಿಗಜಿಣಗಿ ಅವರು ಮತ ಬೇಡವೆಂದು ಹೇಳಿಲ್ಲ. ಆ ಹೇಳಿಕೆಯನ್ನು ತಿರುಚಲಾಗಿದೆ. ಹಾಗಾಗಿ ಸಮಾಜ ಬಾಂಧವರು ಜಿಗಜಿಣಗಿ ಅವರಿಗೆ ಬೆಂಬಲಿಸಬೇಕು ಎಂದರು.

ಈ ವೇಳೆ ಡಾ.ಅನಿಲ ನಾಯಕ್ ಮಾತನಾಡಿ, ಮೋದಿಯವರು ಮಹಾರಾಷ್ಟ್ರದ ವಾಶಿವಮ್ ಜಿಲ್ಲೆಯ ಪೋಹೊರಾ ದೇವಿ ಎಂಬ ಗ್ರಾಮದಲ್ಲಿರುವ ಸಂತ್ ಸೇವಾಲಾಲರ್ ಐಕ್ಯ ಸ್ಥಳ ಮತ್ತು ಜನ್ಮಸ್ಥಳವಾದ ಸುರಕೊಂಡನಕೊಪ್ಪದ ಜೀರ್ಣೋದ್ದಾರಕ್ಕೆ ಬಿಜೆಪಿ ಕಾರಣೀಭೂತವಾಗಿದೆ. ಐಕ್ಯಸ್ಥಳ ಅಭಿವೃದ್ಧಿಗೆ ಮಹಾರಾಷ್ಟ್ರದ ಮನವಿ ಮೇರೆಗೆ ಮೋದಿ ಅಧಿಕಾರದ ಅವಧಿಯಲ್ಲಿ ಪೋಹರಾ ದೇವಿಯಲ್ಲಿ ಸೇವಾಲಾಲರ್ ಮತ್ತು ಜಗದಂಬಾ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಸುಮಾರು ಒಂದು ಸಾವಿರ ಕೋಟಿ ಅನುದಾನ ಮೀಸಲಿಟ್ಟಿದೆ. ಅದರಲ್ಲಿ ಈಗಾಗಲೇ 590ಕೋಟಿ ಅನುದಾನ ಬಿಡುಗಡೆಮಾಡಿದ್ದಾರೆ. ಅವರ ಈ ಕಾರ್ಯಕ್ಕೆ ನಮ್ಮ ಬಂಜಾರ್ ಸಮಾಜ ಋಣಿಯಾಗಿದೆ. ಸದಾಶಿವ ಆಯೋಗದ ವರದಿಯಲ್ಲಿ ಎಸ್‌ಸಿ ಪಟ್ಟಿಯಿಂದ ಬಂಜಾರ್ ಸಮಾಜ ಹೊರ ಹಾಕಿದ್ದಾರೆ ಎಂಬುದು ಸುಳ್ಳು ಸುದ್ದಿ. ನಮ್ಮ ಸಮಾಜದ ಕಾಂಗ್ರೆಸ್ ಮುಖಂಡರು ಸುಮ್ಮನೇ ಸುಳ್ಳು ಸುದ್ದಿಗಳನ್ನು ಹರಡುತ್ತಿದ್ದಾರೆ ಅದಕ್ಕೆ ಯಾರೂ ಕಿವಿ ಕೊಡಬಾರದು ಎಂದರು.

ಈ ವೇಳೆ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ರಾಜು ರಾಠೋಡ, ಪುಂಡಲೀಕ್ ರಾಠೋಡ ಸೇರಿದಂತೆ ಅನೇಕರಿದ್ದರು.

# ಪ್ರಜಾಪ್ರಭುತ್ವ ವ್ಯವಸ್ಥೆ ಎತ್ತಿಹಿಡಿಯಲು ಮತದಾನ ಮಾಡಿ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಮತದಾನ ಪ್ರತಿಯೊಬ್ಬ ನಾಗರಿಕನ ಹಕ್ಕು. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಎತ್ತಿ ಹಿಡಿಯಲು ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕು ಎಂದು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಪರಶುರಾಮ ವನಹಳ್ಳಿ ಹೇಳಿದರು.



ತಾಲೂಕಿನ ಕುಂಟೋಜಿ ಗ್ರಾಮದಲ್ಲಿ ಗ್ರಾ.ಪಂ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮತದಾನ ಜಾಗೃತಿ ಕಾರ್ಯಮದಲ್ಲಿ ಅವರು ಮಾತನಾಡಿದರು.

ದೇಶದ ಅಡಳಿತಕ್ಕೆ ಉತ್ತಮ ವ್ಯಕ್ತಿಯನ್ನು ಆಯ್ಕೆ ಮಾಡುವ ಹಕ್ಕನ್ನು ಪ್ರತಿಯೊಬ್ಬ ನಾಗರಿಕರಿಗೂ ನೀಡಲಾಗಿದೆ. ಈ ಹಕ್ಕನ್ನು ಯಾರೂ ಕಳೆದುಕೊಳ್ಳದೇ ಕಡ್ಡಾಯವಾಗಿ ಮಾತದಾನ ಮಾಡಿ ಪ್ರಜಾ ಪ್ರಭುತ್ವ ವ್ಯವಸ್ಥೆಯನ್ನು ಎತ್ತಿ ಹಿಡಿಯಬೇಕು ಎಂದರು.

ಗ್ರಾಮದ ಪ್ರತೀ ವಾರ್ಡಗೂ ಸಂಚರಿಸಿ ಮತದಾನದ ಜಾಗೃತಿ ಮೂಡಿಸಲಾಯಿತು. ಈ ವೇಳೆ ಕಾರ್ಯದರ್ಶಿ ಗಿರೀಶ ಬಿರಾದಾರ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಪ್ರಾಥಮಿಕ ಶಾಲಾ ಶಿಕ್ಷಕರು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಗ್ರಾ.ಪಂ ಸದಸ್ಯರು ಭಾಗಿಯಾಗಿದ್ದರು.

# ಬಡವರು ನೇಕಾರರಿಗೆ ಕಾಂಗ್ರೆಸ್ ಮಾತೃಪಕ್ಷ :ಉಮಾಶ್ರೀ

**ಉದಯರಶ್ಮಿ ನ್ಯೂಸ್**

ಚಿಮ್ಮಡ: ಹಲವಾರು ಸೌಲಭ್ಯಗಳನ್ನು ನೀಡಿರುವ ಕಾಂಗ್ರೆಸ್ ಬಡವರು, ನೇಕಾರರಿಗೆ ಮಾತೃಪಕ್ಷ ಇದ್ದಂತೆ ಎಂದು ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಹೇಳಿದರು.



ಗ್ರಾಮದ ಅಶೋಕ ಧಡೂತಿಯವರ ಮನೆಯ ಆವರಣದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ನೇಕಾರರಿಗೆ ಆಶ್ರಯ ಮನೆಗಳನ್ನು ನಿರ್ಮಿಸಿದ್ದು ಕಾಂಗ್ರೆಸ್, ಆಶ್ರಯ ಮನೆಗಳ 32 ಕೋಟಿ ಸಾಲವನ್ನುಬರಕಾಸ್ತು ಮಾಡಿದ್ದು, ನೇಕಾರರಿಗೆ ಉಚಿತ ವಿದ್ಯುತ್ ನೀಡುತ್ತಿರುವುದು ಕಾಂಗ್ರೆಸ್ ಪಕ್ಷವಾಗಿದೆ. ಆದರೆ ಕೇಂದ್ರ ಬಿಜೆಪಿ ಸರಕಾರ ದಿನಬಳಕೆಯ ಎಲ್ಲ ವಸ್ತುಗಳ ಬೆಲೆಯೇರಿಸುವ ಮೂಲಕ ಬಡವರನ್ನು ಲೂಟಿ ಹೊಡೆಯುತ್ತಿದೆ, ರೈತರನ್ನು ಕೇವಲವಾಗಿ ಕಾಣುವ ಇವರು ಆಯ್ದ ಕೆಲವು ಉದ್ಯಮಿಗಳಿಗೆ ಮಾತ್ರ ಭರಪೂರ ನೆರವು ನೀಡುತ್ತಿದ್ದಾರೆ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಅವರಿಗೆ ಮತ ನೀಡುವ ಮೂಲಕ ಬಡವರು, ಮದ್ಯಮವರ್ಗದ ವಿರೋಧಿ ಬಿಜೆಪಿ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕು ಎಂದರು.

ನೇಕಾರ ಧುರೀಣ ರವೀಂದ್ರ ಕಲಬುರ್ಗಿ ಮಾತನಾಡಿ ರೈತರು, ನೇಕಾರರು, ಬಡವರು, ಮಧ್ಯಮವರ್ಗದವರಿಗೆ ಪಂಚ ಗ್ಯಾರಂಟಿ ಮೂಲಕ ಪ್ರತಿಯೊಂದು ಮನೆಗಳಿಗೆ ಸರಕಾರದ ಸೌಲಭ್ಯಗಳು ತಲುಪುತ್ತಿವೆ ಎಂದರು.

ನೇಕಾರರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಸಂಗಪ್ಪ ಹಳ್ಳೂರ, ಅಶೋಕ ಧಡೂತಿ ಮಾತನಾಡಿದರು.

ಪ್ರಮುಖರಾದ ಅರುಣ ಗಾಣಿಗೇರ, ಪಿರಸಾಬ ನದಾಫ, ಇಮಾಮ ಯಾದವಾಡ, ಮಹಾದೇವ ಅಥಣಿ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆಗಳು ರಾಷ್ಟ್ರಕ್ಕೆ ಮಾದರಿ ಯೋಜನೆಗಳು :ಮೋಮಿನ

**ಉದಯರಶ್ಮಿ ನ್ಯೂಸ್**

ಇಂಡಿ: ಪಕ್ಷಾತೀತವಾಗಿ ಸಮಾಜದ ಎಲ್ಲ ವರ್ಗದ ಜನ–ರಿಗೂ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ ಶ್ರೇಯಸ್ಸು ಕಾಂಗ್ರೆಸ್‌ಗೆ ಸಲ್ಲುತ್ತದೆ. ಇವು ರಾಷ್ಟ್ರಕ್ಕೆ ಮಾದರಿಯಾದ ಯೋಜನೆಗಳಾಗಿವೆ' ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಾವಿದ ಮೋಮಿನ ಹೇಳಿದರು.



ಪಟ್ಟಣದ ವಾರ್ಡ್ ನಂ 16 ಗೋಡವಾಣ ಗಲ್ಲಿ ಹಾಗೂ ಕಾಲೆಪ್ಲಾಟ ನಲ್ಲಿ ಆಯೋಜಿಸಿದ್ದ ಕಾರ್ಯಕರ್ತರ ಸಭೆ ಹಾಗೂ ಗ್ಯಾರಂಟಿ ಯೋಜನೆಗಳ ಪತ್ರ ವಿತರಣೆ ಮಾಡಿ ಮತಯಾಚನೆ ಮಾಡಿ ಮಾತನಾಡಿದರು.

'₹56 ಸಾವಿರ ಕೋಟಿ ಮೊತ್ತದ ಯೋಜನೆಗಳನ್ನು ಜನರ ಬಾಗಿಲಿಗೆ ತಲುಪಿಸಲಾಗಿದೆ. ಇನ್ನೂ ಹೆಚ್ಚಿನ ಗ್ಯಾರಂಟಿ ಯೋಯೋಜನೆಗಳಿಗಾಗಿ ವಿಜಯಪುರ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ರಾಜೂ ಆಲಗೂರ ಅವರನ್ನು ಬೆಂಬಲಿಸುವ ಮೂಲಕ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು' ಎಂದು ಮನವಿ ಮಾಡಿದರು.

ಬಿಜೆಪಿ ಪಕ್ಷ ಮತದಾರರಿಗೆ ಸುಳ್ಳು ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದಿದ್ದಾರೆ. ಕಳೆದ 70ವರ್ಷಗಳಲ್ಲಿ ಕಾಂಗ್ರೆಸ್ ಏನು ಮಾಡಿದೆ ಎಂದು ಕೇಳುತ್ತಿದ್ದಾರೆ. ನೀರು, ಸೂರು, ವಿದ್ಯುತ್, ರಸ್ತೆಗಳನ್ನು, ಉದ್ಯೋಗ, ಶಾಲಾ–ಕಾಲೇಜುಗ ನೀಡಿದ್ದೇ ಕಾಂಗ್ರೆಸ್ ಎನ್ನುವುದನ್ನು ಯಾರೂ ಮರೆತಿಲ್ಲ. ಆದರೆ, 10 ವರ್ಷದಲ್ಲಿ ಬಿಜೆಪಿ ಏನು ಮಾಡಿದೆ' ಎಂದು ಮಾರ್ಮಿಕವಾಗಿ ಪ್ರಶ್ನಿಸಿದರು.?

ವಾರ್ಡ ಸದಸ್ಯ ಅಸ್ಲಮ ಕಡಣಿ ಮಾತನಾಡಿ ವಿಧಾನಸಭೆ ಚುನಾವಣೆಯ ಪೂರ್ವದಲ್ಲಿ ಜನರಿಗೆ ಕೊಟ್ಟ ಭರವಸೆಗಳನ್ನು ಈಡೇರಿಸಿದೆ. ನುಡಿದಂತೆ ನಡೆದಿದೆ. 5 ಗ್ಯಾರೆಂಟಿ ಯೋಜನೆ ಗೃಹ ಲಕ್ಷ್ಮಿ , ಶಕ್ತಿ, ಗೃಹ ಜ್ಯೋತಿ , ಯುವನಿಧಿ, ಅನ್ನಭಾಗ್ಯ ಯೋಜನೆಯಡಿ 5 ಕೆ ಜಿ ಅಕ್ಕಿ ಮತ್ತು ಉಳಿದ 5 ಕೆ.ಜಿ ಅಕ್ಕಿಯ ಬದಲಾಗಿ ಹಣ ನೇರವಾಗಿ ಅವರಖಾತೆಗೆ ಹಣ ಜಮಾವಣೆ ಇಂತಹ ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ' ಎಂದು ತಿಳಿಸಿದರು.

'ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಪ್ರತಿ ಮನೆಯ ಯಜಮಾನಿಗೆ ವಾರ್ಷಿಕ ₹1ಲಕ್ಷ ,ರೈತರ ಸಾಲ ಮನ್ನಾ , ಸೇ–ರಿದಂತೆ ಇನ್ನೂ ಹಲವು ಜನಪರ ಯೋಜನೆಗಳನ್ನು ಜಾರಿಗೆ ತರಲಿದೆ' ಎಂದು ತಿಳಿಸಿದರು.

ಕಾಂಗ್ರೆಸ್ ಯುವ ಮುಖಂಡ ಹಸನ ಮುಜಾವರ ಮಾತನಾಡಿ 'ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಮುಖಂಡರು ಬೂತ್‌ಮಟ್ಟದಲ್ಲಿ ತಾವೇ ಅಭ್ಯರ್ಥಿ ಎಂದು ಭಾವಿಸಿ ಚುನಾವಣೆ ಎದುರಿಸಬೇಕು' ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಬ್ದುಲ ಕರೀಮ ಬೆನೂರ, ಉಸ್ಮಾನ ತಂಬೂಳಿ, ನಾಗು ದಶವಂತ, ಸುಲೆಮಾನ ಬೇನೂರ, ಜಮೀರ ಬಾಗವಾನ, ಹಸನ ಬೇನುರ, ರಿಯಾಜ ಬಾಗವಾನ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಬಿಸಿಲ ತಾಪಕ್ಕೆ ಬಸವಳಿದ ಜನತೆ :ಅಪಾಯಮಟ್ಟದಲ್ಲಿ ಉಷ್ಣಾಂಶ!

**ಉದಯರಶ್ಮಿ ನ್ಯೂಸ್**

– ಇಲಾಹಿ ಇ. ಜಮಖಂಡಿ

ಚಿಮ್ಮಡ: ಚುನಾವಣಾ ಕಾವು ಒಂದೆಡೆ ಏರುತಿದ್ದರೆ ಈ ಭಾಗದ ತಾಪಮಾನ ಅಪಾಯ ಮಟ್ಟದಲ್ಲಿ ಹೆಚ್ಚುತ್ತಿರುವುದರಿಂದ ಮಕ್ಕಳು, ವಯೋವೃದ್ದರು, ಅನಾರೋಗ್ಯ ಪೀಡಿತರು ಈ ಬಿಸಿಲ ತಾಪದಿಂದ ಬಳಲುತಿದ್ದಾರೆ.

ಗ್ರಾಮದ ಮುಖ್ಯ ರಸ್ತೆಗಳಂತೂ ಜನರಿಲ್ಲದೇ ಬಿಕೋ ಎನ್ನುತ್ತಿವೆ.

ಬೆಳಿಗ್ಗೆ ಎಂಟು ಘಂಟೆಯಿಂದಲೇ ಏರಿಕೆಯಾಗುತ್ತಿರುವ ಬಿಸಿಲಿನ ಪ್ರಖರತೆ ಮದ್ಯಾಹ್ನ 1 ಘಂಟೆ ಎನ್ನುವಷ್ಟರಲ್ಲಿ ಅಪಾಯಮಟ್ಟ ತಲುಪುತ್ತಿದೆ. ಮದ್ಯರಾತ್ರಿಯಲ್ಲೂ ತೀವ್ರ ಧಗೆಯಿಂದ ನಿದ್ರೆಯಿಲ್ಲದೆ ಜನರು ಬಳಲುವಂತಾಗಿದ್ದು, ಜಾನುವಾರುಗಳ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ.



ಈ ಮೊದಲು ನಗರ ಪ್ರದೇಶಗಳಿಗೆ ಮಾತ್ರ ಸಿಮಿತವಾಗಿರುತಿದ್ದ ತಾಪಮಾನ ಏರಿಕೆ ಇದೀಗ ಗ್ರಾಮೀಣ ಪ್ರದೇಶಗಳಿಗೂ ವಿಸ್ತರಿಸಿದೆ, ಇದಕ್ಕೆ ಗ್ರಾಮಗಳಲ್ಲಿ ಕಾಡಿನಂತೆ ಬೆಳೆದ ಮರಗಳಿಗೆ ಕೊಡಲಿ ಏಟು ಬಿದ್ದಿರುವುದು, ಗ್ರಾಮದ ಗಲ್ಲಿ ಗಲ್ಲಿಗಳು ಕಾಂಕ್ರೀಟ್ ಕಾಡಿನಂತಾಗಿರುವುದು ಕಾರಣ. ಹಳೆಯ ಕಾಲದ ಮನೆಗಳ ಛಾವಣಿಗೆ ತಾಪಮಾನ ಹೀರಿಕೊಳ್ಳುವ ಶಕ್ತಿಯುಳ್ಳ ಮಣ್ಣಿನ ಮೇಲಮುದ್ದಿ, ಕಟ್ಟಿಗೆಯಿಂದ ಖಡೇಪಾಟ, ಪ್ರತೀ ಬಚ್ಚಲುಗಳಿಗೆ ಇಂಗುಗುಂಡಿ ನಿರ್ಮಾಣ ಮಾಡಲಾಗುತಿತ್ತು. ಆದರೆ ಈಗಿನ ಮನೆಗಳಿಗೆ ತಾಪಮಾನ ಹೆಚ್ಚಿಸುವ ಪತ್ರಾಸ ಮೇಲ್ಛಾವಣಿ, ಕಾಂಕ್ರೀಟ್ ಸ್ಲ್ಯಾಬ್ ಹಾಕಿಸುತ್ತಿರುವುದರಿಂದ ತಾಪಮಾನ ಅತಿಯಾಗಿ ಏರಿಕೆಯಾಗುತ್ತಿದೆ. ಈಗ ಬೀಸಿಗೆಯಿಂದಾಗಿ ವಿದ್ಯುತ್ ಕೂಡ ಕಣ್ಣಾ ಮುಚ್ಚಾಲೆ ಆಡುತ್ತಿರುವುದ–ರಿಂದ ವಯೋವೃದ್ದರ ಪಾಡು ಹೇಳತೀರದು,



ಇದುವರೆಗೆ ಈ ಭಾಗದ ತಾಪಮಾನ 36 ಡಿಗ್ರಿ ಸೆಲ್ಸಿಯಸ್‌ಗಿಂತಲೂ ಹೆಚ್ಚಿದ ಉಧಾಹರಣೆಯಿಲ್ಲ ಆದರೆ ಈ ಬಾರಿ 40 ರಿಂದ 43 ಡಿಗ್ರಿ ಸೆಲ್ಸಿಯಸ್ ವರೆಗೂ ತಾಪಮಾನ ಏರಿಕೆಯಾಗಿದ್ದರಿಂದ ಆಮ್ಲಜನಕ ಕೊರತೆಯಿಂದ ಸಾರ್ವಜನಿಕರು ಬಳಲುತಿದ್ದಾರೆ.

ಪುಣ್ಯಕ್ಕೆ ಇಲ್ಲಿನ ಜಿಎಲ್ಬಿಸಿ ಕಾಲುವೆಗೆ ಇತ್ತೀಚೆಗೆ ನೀರು ಹರಿಸಿರುವುದರಿಂದ ಕೆರೆ, ಬಾವಿ, ಬೋರ್‌ವೆಲ್‌ಗಳ ಅಂತರ್‌ಜಲಮಟ್ಟ ಸ್ವಲ್ಪ ಪ್ರಮಾಣದಲ್ಲಿ ಏರಿಕೆಯಾಗಿದ್ದು ಬೇಸಿಗೆ ರಜೆಯಲ್ಲಿರುವ ಮಕ್ಕಳು ತಮ್ಮ ಪಾಲಕರೊಂದಿಗೆ ಬಾವಿಗಳಲ್ಲಿ ಈಜುತ್ತ, ಊರ ಹೊರಗಿನ ಮರಗಳಲ್ಲಿ ಮರ ಕೋತಿಯಾಟ ಆಡುತ್ತ ಕಾಲ ಕಳೆಯುತಿದ್ದರೆ, ನಿರ್ಣಾಯಕ ಘಟ್ಟದಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಬೆಳಿಗ್ಗೆಯಿಂದ ಸಂಜೆವರೆಗೂ ಟ್ಯೂಷನ್ ಮೊರೆ ಹೋಗುತಿದ್ದಾರೆ, ಯುವಕರಂತೂ ಎಳೆನೀರು, ತಂಪು ಪಾನೀಯ ಸೇವಿಸುತ್ತ ಬೇಸಿಗೆಯನ್ನು ತಳ್ಳುತಿ–ದ್ದಾರೆ.

ಈ ನಡುವೆ ಒಂದೆರಡು ದೊಡ್ಡ ಮಳೆಗಳು ಭೂವಿಗಿಳಿದಲ್ಲಿ ವಾತಾವರಣ ತಂಪಾಗುವುದಲ್ಲದೇ ಬಿತ್ತನೆ ಕಾರ್ಯಕ್ಕೆ ಅಣಿಯಾಗಲೂ ಸಹಕಾರಿಯಾಗಲಿದೆ ಎಂಬುದು ಗ್ರಾಮದ ರೈತರ ಆಶಯವಾಗಿದೆ.

# ರಾಜು ಆಲಗೂರರಿಗೆ ಮಂಗಳ ಮುಖಿಯರ ಬೆಂಬಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಂಗಳವಾರ ಇಲ್ಲಿನ ಕಾಂಗ್ರೆಸ್ ಕಾರ್ಯಾಲಯ ಕಳೆಗಟ್ಟಿತ್ತು. ಇದಕ್ಕೆ ಕಾರಣ, ಮಂಗಳ ಮುಖಿಯರ ನಗು ಮೊಗದ ಕಲರವ.

ಅವರೆಲ್ಲ ಕಾಂಗ್ರೆಸ್ ಪಕ್ಷದ ಲೋಕಸಭೆ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರಿಗೆ ಸ್ವಯಂ ಪ್ರೇರಣೆಯಿಂದ ಬೆಂಬಲ ಸೂಚಿಸಿ, ಶುಭ ಹರಸಲು ಬಂದಿದ್ದರು.

ವಿಜಯಪುರ ಕ್ಷೇತ್ರದಲ್ಲಿ ಮಂಗಳ ಮುಖಿಯರು ಮತದಾರರಾಗಿ ಒಂದೂವರೆ ಸಾವಿರಕ್ಕಿಂತಲೂ ಹೆಚ್ಚು ಇದ್ದಾರೆ ಎಂದು ಹೇಳಲಾಗಿದೆ. ರಾಜ್ಯ ಸಂಘಟನೆಗಳ ಸಲಹೆಯಂತೆ ಮಂಗಳ ಮುಖಿಯರ ಕ್ಷೇಮಕ್ಕಾಗಿ ಇರುವ ಸಂಘಟನೆಗಳವರು ಆಲಗೂರರಿಗೆ ಬೆಂಬಲ ನೀಡಿದ್ದಾರೆ. ಅದಕ್ಕಾಗಿಯೇ ಇವರು ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿದರು.

ಇವರಿಗೆ ಧನ್ಯವಾದ ಸಲ್ಲಿಸಿ ಮಾತನಾಡಿದ ರಾಜು ಆಲಗೂರ ಅವರು, ಕಾಂಗ್ರೆಸ್‌ಗೆ ಎಲ್ಲ ಕಡೆಯಿಂದ ನಿರೀಕ್ಷೆ ಮೀರಿ ಬೆಂಬಲ ವ್ಯಕ್ತವಾಗುತ್ತಿದೆ. ಇವತ್ತು ಮಂಗಳ ಮುಖಿಯರ ಶುಭ ಹರಕೆ, ಬೆಂಬಲದಿಂದ ಮತ್ತಷ್ಟು ಖುಷಿಯಾಗಿದೆ. ಇವರ ಕ್ಷೇಮಾಭಿವೃದ್ಧಿಗೆ ಬದ್ಧ ಎಂದರು.

ಮಂಗಳ ಮುಖಿಯರ ಪ್ರತಿನಿಧಿಯಾಗಿ ಪ್ರಾರ್ಥನಾ ಅಂಬಿ ಮಾತನಾಡಿ, ಸಮಾಜದ, ಉಳಿದ ಪಕ್ಷಗಳು ಸೇರಿ ಎಲ್ಲರೂ ನಮ್ಮನ್ನು ಮೊದಲಿಂದ ಕಡೆಗಣಿಸಿದ್ದಾರೆ. ಈಗ ಕಾಂಗ್ರೆಸ್ ಮೇಲೆ ವಿಶ್ವಾಸ ಇಟ್ಟಿದ್ದೇವೆ. ನಮಗೆ ವಸತಿ ಸೇರಿ ಒಂದಷ್ಟು ಅನುಕೂಲಗಳು ಆಗಬೇಕು. ನಮಗೆ ಉದ್ಯೋಗ ನೀಡಿದರೆ ಸ್ವಾಭಿಮಾನಿಗಳಾಗಿ ಬದುಕುತ್ತೇವೆ. ಸ್ವಾವಲಂಬಿ ಜೀವನ ಮಾಡುತ್ತೇವೆ. ನಮಗೆ ರಾಜ್ಯ ಸರಕಾರದ ಎರಡು ಸಾವಿರ ರೂ. ಗ್ಯಾರಂಟಿಯಲ್ಲಿ ಸಿಗಬೇಕು. ಕೆಲ ಅನುಕೂಲ ಮಾಡಿಕೊಡಬೇಕು ಎಂದರು.

ಮೂಡಿಗೆರೆ ಮಾಜಿ ಶಾಸಕ ಕುಮಾರಸ್ವಾಮಿ ಪತ್ರಿಕಾಗೋಷ್ಠಿಯಲ್ಲಿದ್ದರು.

ಮಂಗಳ ಮುಖಿಯರ ಸಂಘದ ಗುಲಾಬ ರಾಠೋಡ, ಸುನೀಲ, ಮೇಘಾ, ಮೈನುದ್ದೀನ್, ಶಬ್ಬೀರ್ ಕಾಗದ ಕೋಟಿ, ಸತೀಶ್, ಉಮಾ, ವಿಠ್ಠಲ ಸಾಳುಂಕೆ, ನಾಗಮ್ಮ, ಈರಣ್ಣ ಲಗಳಿ, ವಿಜು ಅನೇಕರಿದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR